ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ-ಧಾರವಾಡ । ಹಾವೇರಿ । ಗದಗ । ಬಾಗಲಕೋಟೆ । ವಿಜಯಪುರ । ಕಲಬುರಗಿ । ತುಮಕೂರು

# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು

EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 54 ರಿ.ನಂ : ಕೆಎನ್ಎಎನ್ / 26 / ಎ5487 ಬಳ್ಳಾರಿ ಗುರುವಾರ ದಿನಾಂಕ : 03-09-2026 ಪುಟ : 04 ಬೆಲೆ : 2-00

## ಅಯೋಧ್ಯೆ ರಾಮಮಂದಿರದ ಸಿಇಓ ಆಗಿ ನಿವೃತ್ತ ಏರ್ ಮಾರ್ಷಲ್ ಮಿಶ್ರಾ ನೇಮಕ



ಲಕ್ನೋ: ಅಯೋಧ್ಯೆ ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ಸಿಇಓ ಆಗಿ ನಿವೃತ್ತ ಏರ್ ಮಾರ್ಷಲ್ ಜೀತೇಂದ್ರ ಮಿಶ್ರಾ ಅವರನ್ನು ನೇಮಕ ಮಾಡಲಾಗಿದೆ.

ಸಿಇಓ ಆಗಿ ನೇಮಕ ಆಗಿರುವ ನಿವೃತ್ತ ಏರ್ ಮಾರ್ಷಲ್ ಜೀತೇಂದ್ರ ಮಿಶ್ರಾ ಅವರು ಆಪರೇಷನ್ ಸಿಂಧೂರದ ಸಮಯದಲ್ಲಿ ಪಶ್ಚಿಮ ವಾಯು ಕಮಾಂಡ್ ಮುಖ್ಯಸ್ಥರಾಗಿದ್ದರು. ಜೊತೆಗೆ ಅನುಭವಿ ಯುದ್ಧ ವಿಮಾನ ಪೈಲಟ್ ಆಗಿದ್ದಾರೆ.

## ರಾಹುಲ್‌ನ್ನನ್ನು ರಾಜಕೀಯವಾಗಿ ಮುಗಿಸುವ ಸಂಚು:

# ಕೇಂದ್ರದ ವಿರುದ್ಧ ಸಿಡಿದ ಸಿದ್ರಾಮಯ್ಯ



ಬೆಂಗಳೂರು: ಏನಾದ್ರೂ ಮಾಡಿ ರಾಹುಲ್ ಗಾಂಧಿ ಅವರನ್ನ ರಾಜಕೀಯವಾಗಿ ಮುಗಿಬೇಕು ಅಂತ ಕೇಂದ್ರ ಸರ್ಕಾರ ಹಾಗೂ ಬಿಜೆಪಿಯಿಂದ ಸಂಚು ನಡೆದಿದೆ ಎಂದು ಮಾಜಿ ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ಶುದ್ಧೀಕರಣ ಹೇಳಿಕೆ ಸಂಬಂಧ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ವಿರುದ್ಧ ಎಸ್ಸಿ-ಎಸ್ಟಿ ಕಾಯ್ದೆ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿರುವುದನ್ನ ಖಂಡಿಸಿ ಇಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ ಹರಿಪ್ರಸಾದ್ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು. ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಪ್ರತಿಭಟನೆ ವೇಳೆ ಸಿದ್ದರಾಮಯ್ಯ ಮಾತನಾಡಿ, ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಮಲ್ಲಿಕಾರ್ಜುನ ಖರ್ಗೆ ಅವರು ಭಾಷಣ ಮಾಡಿದ್ದ ಜಾಗವನ್ನ ಉತ್ತರಖಂಡದವರು ಶುದ್ಧೀಕರಣ

2ನೇ ಪುಟಕ್ಕೆ...

## ದುಡ್ಡು-ಬ್ಲಡ್ಡು ಸರ್ಕ್ಯುಲೇಟ್ ಆಗ್ತಿರಬೇಕು

# ಸಿಎಂ ಡಿ.ಕೆ. ಶಿವಕುಮಾರ್



ಬೆಂಗಳೂರು: ಇಂದು ಉದ್ಯಮ ನಡೆಸುವುದು ಅಷ್ಟು ಸುಲಭವಲ್ಲ, ಸಾಲ ತೆಗೆದುಕೊಳ್ಳುವಾಗ ಬ್ಯಾಂಕುಗಳು ಸಾಕಷ್ಟು ದಾಖಲೆಗಳನ್ನು ಕೇಳುತ್ತವೆ, ಸಾಕಷ್ಟು ಒತ್ತಡವಿರುತ್ತದೆ, ನಾನು ಚಿಕ್ಕವನಿರುವಾಗ ನನ್ನ ಸೋದರಮಾವ ಹೇಳುತ್ತಿದ್ದರು, ನೂರು ಚಪ್ಪಲಿಯೇಟು ಪಟ ಪಟ ಅಂತ ಹೊಡೆದರೆ ತಿನ್ನಬಹುದು, ದುಡ್ಡು ಏಟು ತಿನ್ನಲು ಸಾಧ್ಯವಿಲ್ಲ ಎನ್ನುತ್ತಿದ್ದರು. ಅಂದರೆ ಉದ್ಯಮ, ವ್ಯಾಪಾರ ಹಾಗೂ ಜೀವನದಲ್ಲಿ ಆರ್ಥಿಕ ಸವಾಲು, ಸಂಕಷ್ಟ, ಒತ್ತಡವನ್ನು ನಿಭಾಯಿಸುವುದು ಕಷ್ಟ ಎಂದು ಅನುಭವದ ಮಾತು ಹೇಳುತ್ತಿದ್ದರು, ಅವರ ಮಾರ್ಗದರ್ಶನದಲ್ಲಿ ನಾನು ಬೆಳೆದೆ ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹೇಳಿದರು.

ಇಂದು ಬೆಂಗಳೂರಿನಲ್ಲಿ, ಉಬುಂಟು ಕನ್ಸಾರ್ಟಿಯಂ ಆಫ್ ವುಮೆನ್ ಎಂಟರ್‌ಪ್ರೆನರ್ಸ್ ಅಸೋಸಿಯೇಷನ್ಸ್ ಆಯೋಜಿಸಿದ್ದ 'ಟುಗ-'ದರ್ ವಿ ಗ್ರೋ' 5ನೇ ಆವೃತ್ತಿ ಹಾಗೂ ಅಂತಾರಾಷ್ಟ್ರೀಯ ಮಹಿಳಾ ಉದ್ಯಮಶೀಲತಾ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಉದ್ಯಮ ನಡೆಸುವುದು, ಉದ್ಯೋಗ ಸೃಷ್ಟಿ ಮಾಡುವುದು, ಉದ್ಯೋಗ ನೀಡುವ

2ನೇ ಪುಟಕ್ಕೆ...

## ರಷ್ಯಾ ಕ್ಷಿಪಣಿ ದಾಳಿಗೆ ತೆಲಂಗಾಣದ ಮೂಲದ ಕಾರ್ಮಿಕ ಬಲಿ



ಹೈದರಾಬಾದ್: ಉಕ್ರೇನ್‌ನಲ್ಲಿ ರಷ್ಯಾ ನಡೆಸಿದ ಕ್ಷಿಪಣಿ ದಾಳಿಗೆ ತೆಲಂಗಾಣ ಮೂಲದ 42 ವರ್ಷದ ವಲಸೆ ಕಾರ್ಮಿಕರೊಬ್ಬರು ಮೃತಪಟ್ಟಿದ್ದಾರೆ. ಮತ್ತೊಬ್ಬ ತೆಲಂಗಾಣ ಮೂಲದ ವ್ಯಕ್ತಿ ದಾಳಿಯಲ್ಲಿ ಗಾಯಗೊಂಡಿದ್ದಾರೆ.ಮೃತಪಟ್ಟವರನ್ನು ಜಗಿತ್ಯಾಲ್ ಜಿಲ್ಲೆಯ ಹುಸ್ನಾಬಾದ್ ಗ್ರಾಮದ ನಿವಾಸಿ ವಾವಿಲಾಲ ಸುದರ್ಶನ್ ಗೌಡ ಎಂದು ಗುರುತಿಸಲಾಗಿದೆ. ಸುಮಾರು ನಾಲ್ಕು ತಿಂಗಳ ಹಿಂದೆ ಉದ್ಯೋಗದ ಹುಡುಕಾಟದಲ್ಲಿ ಸಂಬಂಧಿಯೊಬ್ಬರೊಂದಿಗೆ ಸುದರ್ಶನ್ ಗೌಡ ಉಕ್ರೇನ್‌ಗೆ ತೆರಳಿದ್ದರು. ಅಲ್ಲಿ ನಿರ್ಮಾಣ ಕ್ಷೇತ್ರದಲ್ಲಿ ಕೆಲಸಕ್ಕೆ ಸೇರಿಕೊಂಡಿದ್ದರು. ಉಕ್ರೇನ್‌ನ ಒಡೆಸಾ ನಗರದಲ್ಲಿ ವಾಯುದಾಳಿ ಎಚ್ಚರಿಕೆ ನೀಡಲಾಗಿತ್ತು. ಈ ಹಿನ್ನೆಲೆಯಲ್ಲಿ ತಾವು ವಾಸಿಸುತ್ತಿದ್ದ ಸ್ಥಳದಿಂದ ಹೊರಗೆ ತೆರಳುತ್ತಿದ್ದ ವೇಳೆ ರಷ್ಯಾ ನಡೆಸಿದ ಕ್ಷಿಪಣಿ ದಾಳಿಗೆ ಸುದರ್ಶನ್ ಸಿಲುಕಿ ಮೃತಪಟ್ಟಿದ್ದಾರೆ.


# ನೀವೇನ್ ದಾನ ಕೊಡ್ತಿಲ್ಲ.. ಪ್ರವಾಹಕ್ಕೆ ನೀವೇ ಕಾರಣ..

## ಪರಿಹಾರ ಕೊಡಿ ಅಷ್ಟೇ: ಭಾರತ, ಚೀನಾ, ಅಮೆರಿಕಕ್ಕೆ ನೇಪಾಳ ಖಡಕ್ ಆಗ್ರಹ!

ಕಠ್ಮಂಡು: ಭೀಕರ ಪ್ರವಾಹ ಮತ್ತು ಭೂಕುಸಿತದಿಂದ ತತ್ತರಿಸಿರುವ ನೇಪಾಳ, ಹವಾಮಾನ ಬದಲಾವಣೆಗೆ ಕಾರಣವಾಗುತ್ತಿರುವ ಪ್ರಮುಖ ಹಸಿರುಮನೆ ಅನಿಲ ಹೊರಸೂಸುವ ರಾಷ್ಟ್ರಗಳಾದ ಭಾರತ, ಚೀನಾ ಮತ್ತು ಅಮೆರಿಕದಿಂದ ಪರಿಹಾರ ನೀಡುವಂತೆ ಆಗ್ರಹಿಸಿದೆ.

ಜಾಗತಿಕ ಹೊರಸೂಸುವಿಕೆಯಲ್ಲಿ ದೊಡ್ಡ ಪಾಲು ಹೊಂದಿರುವ ರಾಷ್ಟ್ರಗಳು, ಹವಾಮಾನ ಬದಲಾವಣೆಯಿಂದ ತೀವ್ರ ನಷ್ಟ ಅನುಭವಿಸುತ್ತಿರುವ ದೇಶಗಳ ಹೊಣೆಗಾರಿಕೆಯನ್ನು ಹಂಚಿಕೊಳ್ಳಬೇಕು ಎಂದು ನೇಪಾಳ ವಾದಿಸಿದೆ.

ಇತ್ತೀಚೆಗೆ ಸಂಭವಿಸಿದ ಭೀಕರ ಪ್ರವಾಹ ಮತ್ತು ಭೂಕುಸಿತದಲ್ಲಿ 1,000ಕ್ಕೂ ಹೆಚ್ಚು




ಮಂದಿ ಮೃತಪಟ್ಟಿದ್ದು, ಸಾವಿರಾರು ಜನರು ನಾಪತ್ತೆಯಾಗಿದ್ದಾರೆ.

ವ್ಯಾಪಕ ಹಾನಿ ಸಂಭವಿಸಿರುವ ಹಿನ್ನೆಲೆಯಲ್ಲಿ, ಮನೆಗಳು, ರಸ್ತೆಗಳು, ಸೇತುವೆಗಳು ಸೇರಿದಂತೆ ಮೂಲಸೌಕರ್ಯಗಳ ಪುನರ್‌ನಿರ್ಮಾಣಕ್ಕೆ ಕೋಟ್ಯಂತರ ಡಾಲರ್ ಅಗತ್ಯವಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಅಂತರರಾಷ್ಟ್ರೀಯ ಹವಾಮಾನ ಹಣಕಾಸು

4ನೇ ಪುಟಕ್ಕೆ...

## ಪಡಿತರ ಮಾನದಂಡ ಪರಿಷ್ಕರಣೆ: ಸಚಿವ ರಿಜ್ವಾನ್ ಅರ್ಷದ್



ಮೈಸೂರು: 'ಆದ್ಯತಾ ಪಡಿತರ ಚೀಟಿಗಳನ್ನು ಪಡೆಯಲು ಇರುವ ಮಾನದಂಡಗಳನ್ನು ಪರಿಷ್ಕರಿಸಲು ಚಿಂತನೆ ನಡೆದಿದೆ' ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವ ರಿಜ್ವಾನ್ ಅರ್ಷದ್ ತಿಳಿಸಿದರು. ಜಿಲ್ಲಾ ಪತ್ರಕರ್ತರ ಸಂಘದಿಂದ ಬುಧವಾರ ಹಮ್ಮಿಕೊಂಡಿದ್ದ ಸಂವಾದದಲ್ಲಿ ಮಾತನಾಡಿ, 'ಇಲಾಖೆಗೆ ಸಂಬಂಧಿಸಿದ ಎಲ್ಲ ಗೋದಾಮುಗಳಲ್ಲೂ ಸಿಸಿಟಿವಿ ಕ್ಯಾಮೆರಾ ಅಳವಡಿಸಲಾಗುವುದು. ಎಲ್ಲ ಆಹಾರಧಾನ್ಯ ಸಾಗಣೆ ವಾಹನಗಳಿಗೆ ಜಿಪಿಎಸ್ ಸಾಧನ ಅಳವಡಿಸುವಂತೆ ಸೂಚಿಸಲಾಗಿದೆ. ಕೇಂದ್ರ ಕಚೇರಿಯಲ್ಲಿ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್ ಸ್ಥಾಪಿಸಿ ಅಲ್ಲಿಂದ ಎಲ್ಲವನ್ನೂ

2ನೇ ಪುಟಕ್ಕೆ...

## ಮುಡಾ : ಹೊಸ ತಿರುವು ಹೈಕೋರ್ಟ್ ಮೆಟ್ಟಿಲೇರಿದ ಇಡಿ




ಬೆಂಗಳೂರು : ಮುಡಾ ಪ್ರಕರಣಕ್ಕೆ ಹೊಸ ತಿರುವು ಸಿಕ್ಕಿದೆ. ಮುಡಾ ಪ್ರಕರಣ ಬಿ ರಿಪೋರ್ಟ್ ಪ್ರಶ್ನಿಸಿ ಜಾರಿ ನಿರ್ದೇಶನಾಲಯ (ಇ.ಡಿ) ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ. ಹಲವು ಅಂಶಗಳನ್ನು ಲೋಕಾಯುಕ್ತ ತನಿಖಾಧಿಕಾರಿ ಪರಿಗಣಿಸಿಲ್ಲ. ಇಡಿ ತನಿಖೆಯಲ್ಲಿ ಬೆಳಕಿಗೆ ಬಂದ ಅಂಶಗಳನ್ನು ಪರಿಗಣಿಸಿಲ್ಲ. ಕಾನೂನು ಬಾಹಿರ ಡಿನೋಟಿಫಿಕೇಷನ್ ಬಗ್ಗೆ ತನಿಖೆ ಸಮರ್ಪಕವಾಗಿಲ್ಲ.

## ಡಿಸೆಂಬರ್ ಒಳಗೆ ಬಾಂಗ್ಲಾದೇಶಕ್ಕೆ ಮರಳುತ್ತೇನೆ: ಶೇಖ್ ಹಸೀನಾ



ನವದೆಹಲಿ : ಬಾಂಗ್ಲಾದೇಶದಲ್ಲಿ ನಡೆದ ಕ್ಷಿಪ್ರ ರಾಜಕೀಯ ಕ್ರಾಂತಿಯ ನಂತರ ಭಾರತದಲ್ಲಿ ಆಶ್ರಯ ಪಡೆದಿರುವ ಬಾಂಗ್ಲಾದ ಮಾಜಿ ಪ್ರಧಾನಿ ಶೇಖ್ ಹಸೀನಾ, ಇದೇ ಡಿಸೆಂಬರ್ ತಿಂಗಳ ವೇಳೆಗೆ ತಮ್ಮ ತಾಯ್ನಾಡಿಗೆ ಮರಳುವುದಾಗಿ ಅಧಿಕೃತವಾಗಿ ಘೋಷಿಸಿದ್ದಾರೆ.ಹಿಂದೂಸ್ತಾನ್ ಟೈಮ್ಸ್‌ಗೆ ನೀಡಿದ ವಿಶೇಷ ಸಂದರ್ಶನದಲ್ಲಿ ಮಾತನಾಡಿದ ಅವರು, ಬಾಂಗ್ಲಾದೇಶದ ಪ್ರಸ್ತುತ ಬಿಎನ್‌ಪಿ ಸರ್ಕಾರದ ಪ್ರಧಾನಿ ತಾರಿಕ್ ರೆಹಮಾನ್ ಅವರ ಭಾರತ ಭೇಟಿಗೆ ತಮ್ಮ ಹಸ್ತಾಂತರವನ್ನು ಷರತ್ತಾಗಿ ವಿಧಿಸಿರುವುದನ್ನು ಪ್ರಶ್ನಿಸಿದ್ದಾರೆ.

## ಬಳ್ಳಾರಿಯ ಚಲಾವಣೆ ಇಲ್ಲದ ಲೀಡರ್ಸ್.. ರೆಡ್ಡಿ, ರಾಮುಲು ವಿರುದ್ಧ ನಾಗೇಂದ್ರ ಕೆಂಡ




ಬಳ್ಳಾರಿ: ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ನಡೆಸುತ್ತಿರುವ ಪಾದಯಾತ್ರೆ ಹಾಗೂ ನಾಯಕರ ಹೇಳಿಕೆಗಳ ವಿರುದ್ಧ ಮಾಜಿ ಸಚಿವ ಬಿ. ನಾಗೇಂದ್ರ ತೀವ್ರ ಆಕ್ರೋಶ ಹೊರಹಾಕಿದ್ದಾರೆ. ಶಾಸಕ ಜಿ. ಜನಾರ್ದನರೆಡ್ಡಿ ಹಾಗೂ ಮಾಜಿ ಸಚಿವ ಬಿ. ಶ್ರೀರಾಮುಲು ಅವರನ್ನು ಬಳ್ಳಾರಿಯಲ್ಲಿ ಚಲಾವಣೆ ಇಲ್ಲದ ನಾಣ್ಯಗಳು ಎಂದು ಕರೆದಿರುವ ನಾಗೇಂದ್ರ, ಅವರ ವಿರುದ್ಧ ಏಕವಚನದಲ್ಲೇ ವಾಗ್ದಾಳಿ ನಡೆಸಿದ್ದಲ್ಲದೆ ಚುನಾವಣಾ ಅಖಾಡ-ಕ್ಕೆ ಬರುವಂತೆ ಬಹಿರಂಗ ಸವಾಲು ಹಾಕಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಜನಾರ್ದನರೆಡ್ಡಿ ಮತ್ತು ಶ್ರೀರಾಮುಲು ಅವರ ಹಾವಭಾವಗಳನ್ನು ಮಿಮಿಕ್ರಿ ಮಾಡಿ ವ್ಯಂಗ್ಯವಾಡಿದ ನಾಗೇಂದ್ರ, ತಮ್ಮ ಮೇಲಿನ ಆರೋಪಗಳನ್ನು ತಳ್ಳಿಹಾಕಿದ್ದಾರೆ. ನ್ಯಾಯಾಲಯದಿಂದಲೇ ಅಪರಾಧಿ

4ನೇ ಪುಟಕ್ಕೆ...

## ಮೇಕೆದಾಟು ವಿಚಾರದಲ್ಲಿ ಕರ್ನಾಟಕ ದಿಟ್ಟ ಹೆಜ್ಜೆ;



ನವದೆಹಲಿ: ಮಹತ್ವದ ಬೆಳವಣಿಗೆಯಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಲು ಉದ್ದೇಶಿಸಿರುವ ಮೇಕೆದಾಟು ಸಮತೋಲನ ಜಲಾಶಯ ಯೋಜನೆಗೆ ವೇಗ ನೀಡಲು ಕರ್ನಾಟಕ ಸರ್ಕಾರ ತನ್ನ ಪ್ರಯತ್ನಗಳನ್ನು ಮತ್ತಷ್ಟು ಚುರುಕುಗೊಳಿಸಿದೆ. ರಾಜ್ಯ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅವರು ಬುಧವಾರ ನವದೆಹಲಿಯಲ್ಲಿ ಕೇಂದ್ರ ಜಲ ಆಯೋಗದ ಅಧ್ಯಕ್ಷ ಅನುಪಮ್ ಪ್ರಸಾದ್ ಅವರನ್ನು ಭೇಟಿಯಾಗಿ ಮಹತ್ವದ ಮಾತುಕತೆ ನಡೆಸಿದರು.

## ಬಳ್ಳಾರಿ ಚಲೋ ಪಾದಯಾತ್ರೆ: ಬಿವೈವಿ ಬರ ಪರಿಶೀಲನೆ



ರಾಯಚೂರು: ಬಳ್ಳಾರಿ ಚಲೋ ಪಾದಯಾತ್ರೆ ವೇಳೆ ಮಸ್ಕಿ ತಾಲೂಕಿನ ಬೇಡರಕಾರಲಕುಂಟಿ ಗ್ರಾಮದ ಜಮೀನಿನಲ್ಲಿ ಬಿಜೆಪಿ ರಾಜಾಧ್ಯಕ್ಷ ಬಿ.ವೈ ವಿಜಯೇಂದ್ರ ಬೆಳೆ ಹಾನಿ ವೀಕ್ಷಣೆ ಮಾಡಿದರು.

ರೈತ ದುರ್ಗೇಶ್, ತಿಮ್ಮಣ್ಣ ಬೆಳೆದ ಸಜ್ಜೆ ಬೆಳೆ ಹಾಳಾಗಿರುವುದನ್ನ ಪರಿಶೀಲಿಸಿದರು. ಬಳಿಕ ಮಾತಮಾಡಿ, ರೈತ ದುರ್ಗೇಶ ಎರಡು ಬಾರಿ ಸಜ್ಜೆ ಬಿತ್ತನೆ ಮಾಡಿದ್ದು ಬೆಳೆ ಬಂದಿಲ್ಲಾ. ಮಳೆಯಿಲ್ಲದೆ ಬೆಳೆ ನಾಶವಾಗಿದೆ. ಆದರೆ ಈ ಭಾಗದ ಶಾಸಕರು, ಅಧಿಕಾರಿಗಳು ರೈತರನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ. ಬರಗಾಲ ಪರಸ್ಥಿತಿಯನ್ನ ತೋರಿಸಲು ಲಂಚ ಕೊಡುವ ಪರಸ್ಥಿತಿ ಬಂದಿದೆ. ರೈತರ ಕಷ್ಟ ಕೇಳದಿದ್ದರೆ ರೈತರ ಪಾಲಿಗೆ ಈ ಸರ್ಕಾರ ಬದುಕಿದ್ದು ಸತ್ತಂತ್ತಾಗಿದೆ ಅಂತ ಆಕ್ರೋಶ ವ್ಯಕ್ತಪಡಿಸಿದರು.

4ನೇ ಪುಟಕ್ಕೆ...

## ರಾಜೀನಾಮೆ ಕೊಟ್ಟು ಚುನಾವಣೆ ಎದುರಿಸೋಣ: ಸುರೇಶ್‌ಬಾಬು



ಬಳ್ಳಾರಿ: ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ಹಣದಿಂದಲೇ ಲೋಕಸಭಾ ಚುನಾವಣೆಯಲ್ಲಿ ಗೆದ್ದಿರುವ ತುಕಾರಾಂ ಅವರಿಗೆ ಬಿಜೆಪಿ ನಾಯಕರ ವಿರುದ್ಧ ಮಾತನಾಡುವ ನೈತಿಕತೆ ಇಲ್ಲ ಎಂದು ಮಾಜಿ ಶಾಸಕ ಸುರೇಶ್‌ಬಾಬು ವಾಗ್ದಾಳಿ ನಡೆಸಿದರು.

ಬಳ್ಳಾರಿಯಲ್ಲಿ ಮಾತನಾಡಿದ ಅವರು, “ತುಕಾರಾಂ ಲೋಕಸಭಾ ಸ್ಥಾನಕ್ಕೆ ರಾಜೀನಾಮೆ ನೀಡಲಿ. ಅದೇ ವೇಳೆ ಜನಾರ್ದನ ರೆಡ್ಡಿ ಕೂಡ ರಾಜೀನಾಮೆ ನೀಡುತ್ತಾರೆ. ಇಬ್ಬರೂ ಒಟ್ಟಿಗೆ ಚುನಾವಣೆ ಎದುರಿಸೋಣ. ಯಾರು ಗೆಲ್ಲುತ್ತಾರೆ ಎಂಬುದನ್ನು ಜನರೇ ತೀರ್ಮಾನಿಸಲಿ” ಎಂದು ಸವಾಲು ಹಾಕಿದರು.

## ಸಕ್ಕರೆ ದಾಸ್ತಾನು ಮಿತಿಗೆ ಕೇಂದ್ರದ ಕಡಿವಾಣ

ನವದೆಹಲಿ: ಹಬ್ಬದ ಋತುವಿನಲ್ಲಿ ಸಕ್ಕರೆ ಬೆಲೆ ಸ್ಥಿರತೆ ಕಾಪಾಡಲು ಕೇಂದ್ರ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ. ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ಪ್ರಕಟಣೆ ನೀಡಿದ್ದು, ಸಕ್ಕರೆ ವಿತರಕರ ದಾಸ್ತಾನು ಮಿತಿಯನ್ನು 4000 ಕ್ವಿಂಟಲ್‌ನಿಂದ 2000 ಕ್ವಿಂಟಲ್‌ಗೆ ಇಳಿಸಲಾಗಿದೆ. ಇದು ಸೆಪ್ಟೆಂಬರ್ 15 ರಿಂದ ನವೆಂಬರ್ 30 ರವರೆಗೆ ಜಾರಿಯಲ್ಲಿರಲಿದೆ. ಕೋಲ್ಕತ್ತಾ ಮತ್ತು ಸುತ್ತಮುತ್ತ ಮಾತ್ರ 4000 ಕ್ವಿಂಟಲ್ ಮಿತಿ ಮುಂದುವರಿಯಲಿದೆ ಎಂದಿದ್ದಾರೆ. ಅಲ್ಲಿ ಈಶಾನ್ಯ ರಾಜ್ಯಗಳಿಗೆ ಸಕ್ಕರೆ ಪೂರೈಕೆಯಾಗುವುದರಿಂದ ವಿನಾಯಿತಿ ನೀಡಲಾಗಿದೆ.



ಒಂದನೇ ಪುಟದಿಂದ..

# ರಾಹುಲ್‌ನ್ನನ್ನು ರಾಜಕೀಯವಾಗಿ ಮುಗಿಸುವ ಸಂಚು: ಕೇಂದ್ರದ ವಿರುದ್ಧ ಸಿಡಿದ ಸಿದ್ರಾಮಯ್ಯ



ಮಾಡಿದ್ದಾರೆ. ಸಂವಿಧಾನ ಅಸ್ಪೃಶ್ಯತೆಯನ್ನ ರದ್ದು ಮಾಡಿದೆ. ಆದ್ರೆ ದೇಶಕ್ಕೆ ಸ್ವಾತಂತ್ರ್ಯ ಬಂದು 80 ವರ್ಷಗಳಾಗುತ್ತಿದ್ದರೂ ಈ ರೀತಿ ಮಾಡಿರೋದು ಸಂವಿಧಾನದ ಆಶಯ ವಿರೋಧ ಮಾಡಿದಂತೆ. ಇದು ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮಾತ್ರ ಮಾಡಿದ ಅಪಮಾನವಲ್ಲ, ದಲಿತ ಸಮುದಾಯಕ್ಕೆ ಮಾಡಿದ ಅಪಮಾನ. ರಾಹುಲ್ ಗಾಂಧಿ ಏನು ತಪ್ಪು ಮಾಡಿದ್ದಾರೆ? ಇದರ ವಿರುದ್ಧ ನಾವೆಲ್ಲ ಪ್ರತಿಭಟನೆ ಮಾಡಬೇಕು ಎಂದು ಕರೆ ನೀಡಿದರು.

ಉತ್ತರಾಖಂಡದವರು ಮಾಡಿದ ತಪ್ಪನ್ನ ರಾಹುಲ್ ಗಾಂಧಿ ಪ್ರಶ್ನೆ ಮಾಡಿದ್ದಾರೆ. ಕಾನೂನಿನ ಪ್ರಕಾರ ಯಾರು ಶುದ್ಧೀಕರಣ ಮಾಡಿದ್ದಾರೋ ಅವರ ವಿರುದ್ಧ ಎಸ್ಸಿ –ಎಸ್ಟಿ ಕಾಯ್ದೆ ಅಡಿಯಲ್ಲಿ ಕೇಸ್ ದಾಖಲಿಸಬೇಕು. ಆದ್ರೆ ಯಾವ ತಪ್ಪು ಮಾಡದ ರಾಹುಲ್ ಗಾಂಧಿ ಮೇಲೆ ಎಫ್‌ಐಆರ್ ದಾಖಲಿಸಿದ್ದಾರೆ. ರಾಹುಲ್ ಗಾಂಧಿ ಸಂವಿಧಾನದ ಪರ ಇರುವವರು, ಅಸ್ಪೃಶ್ಯತೆಯ ವಿರುದ್ಧ ಇರುವವರು ಎಂದು ಹೇಳಿದರು.

ರಾಹುಲ್ ಗಾಂಧಿ ಅವರ ಬಾಯಿ ಮುಚ್ಚಿಸಲು ಹೀಗೆ ಮಾಡಿದ್ದಾರೆ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಹೇಗಾದ್ರೂ ಮಾಡಿ ರಾಹುಲ್ ಗಾಂಧಿ ಅವರನ್ನ ರಾಜಕೀಯವಾಗಿ ಮುಗಿಸಬೇಕೆಂದು ಸಂಚು ಮಾಡಿದೆ. ಈ ಹಿಂದೆಯೂ ಲೋಕಸಭೆಯಲ್ಲಿ ಕೇಂದ್ರ ಸರ್ಕಾರವನ್ನ ಟೀಕಿಸಿದ್ದಾಗ ಲೋಕಸಭೆಗೆ ರಾಹುಲ್ ಗಾಂಧಿ ಬರದಂತೆ ಮಾಡಲು ಅವರ ಸದಸ್ಯತ್ವವನ್ನೇ ರದ್ದು ಮಾಡಿದ್ರು. ಸುಪ್ರೀಂ ಕೋರ್ಟ್‌ನಲ್ಲಿ ಹೋಗಿ ರಾಹುಲ್ ಗಾಂಧಿ ಅವರು ಸದಸ್ಯತ್ಯ ವಾಪಸ್ ಪಡೆದುಕೊಳ್ಳಬೇಕಾಯ್ತು. ಇಂತಹ ಕಾನೂನು ಬಾಹಿರ ಕ್ರಮವನ್ನ ಕೇಂದ್ರ ಸರ್ಕಾರ ಮಾಡುತ್ತಾ ಬಂದಿದೆ ಎಂದು ವಾಗ್ದಾಳಿ ನಡೆಸಿದರು.

ಬಿಜೆಪಿ ಅಧಿಕಾರದಲ್ಲಿರಲು ನಾಲಾಯಕ್, ಕೇಂದ್ರದಲ್ಲಿ ಸಂವಿಧಾನ ವಿರೋಧಿ ಸರ್ಕಾರ ಇದೆ. ರಾಹುಲ್ ಗಾಂಧಿ ಅವರ ವಿರುದ್ಧ ಈಗ ಹಾಕಿರುವ ಕೇಸ್ ಸಹಿಸಲು ಆಗಲ್ಲ. ದಲಿತರ ಹಕ್ಕು, ಸಂವಿಧಾನದಲ್ಲಿಕೊಟ್ಟ ಹಕ್ಕು. ಶುದ್ಧೀಕರಣ ಕೆಲಸವನ್ನ ಮನುವಾದಿಗಳು ಮಾಡಿದ್ದಾರೆ. ನಾವೆಲ್ಲ ಒಟ್ಟಾಗಿ ಸೇರಿ ಇದನ್ನ ಖಂಡಿಸಬೇಕು. ಜಿಲ್ಲಾ ಹಾಗೂ ತಾಲೂಕಿನ ಮಟ್ಟದಲ್ಲಿ ಪ್ರತಿಭಟನೆ ಮಾಡಬೇಕು. ಏಕೆಂದ್ರೆ ಬಿಜೆಪಿಗರು ಸಂವಿಧಾನದ ವಿರೋಧಿಗಳು, ಅವರಿಗೆ ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಲ್ಲ. ಬಿಜೆಪಿ ಮಾಡಿದ್ದು ಅಕ್ಷಮ್ಯ ಅಪರಾಧ ಇದರ ವಿರುದ್ಧ ನಾವೆಲ್ಲ ಒಗ್ಗಟ್ಟಾಗಿ ಪ್ರತಿಭಟಿಸಬೇಕು ಎಂದು ಕರೆ ಕೊಟ್ಟರು.

# ದುಡ್ಡು–ಬ್ಲಡ್ಡು ಸರ್ಕ್ಯುಲೇಟ್ ಆಗ್ತಿರಬೇಕು ಸಿಎಂ ಡಿ.ಕೆ. ಶಿವಕುಮಾರ್



ಮತ್ತು ಸಮಾಜದ ಎಲ್ಲಾ ವರ್ಗದ ಜನರ ಆರ್ಥಿಕ ಶಕ್ತಿ ಬಲವರ್ಧನೆಗೆ ಸಹಾಯವಾಗಿದೆ ಎಂದರು.

ನಾನು ಬಾಲಗಂಗಾಧರನಾಥ ಸ್ವಾಮೀಜಿಗಳ 50ನೇ ಜನ್ಮದಿನಾಚರಣೆ ಕಾರ್ಯಕ್ರಮಕ್ಕೆ ಹೋಗಿದ್ದಾಗ ಸಾಯಿಬಾಬಾ ಅವರು ನನಗೆ ಹೇಳಿದ್ದರು, ದುಡ್ಡು,ಬ್ಲಡ್ಡು ಎರಡೂ ಸರ್ಕ್ಯುಲೇಟ್ ಆಗುತ್ತಿರಬೇಕು, ಬ್ಲಡ್ ದೇಹದಲ್ಲಿ ಒಂದು ಕಡೆ ನಿಂತುಬಿಟ್ಟರೆ ಆರೋಗ್ಯ ಸಮಸ್ಯೆಯಾಗುತ್ತದೆ, ದುಡ್ಡು ಒಂದೇ ಕಡೆ ಸಂಗ್ರಹವಾಗಿದ್ದರೆ ಆದಾಯ ತೆರಿಗೆ ಇಲಾಖೆ, ವಾಣಿಜ್ಯ ತೆರಿಗೆ ಇಲಾಖೆ ದಾಳಿಗಳು, ಕುಡಿಕೆ ಕಳ್ಳತನ ಇತ್ಯಾದಿ ಆಗುತ್ತದೆ,ಹಣ ಯಾವತ್ತೂ ಚಲನಶೀಲನವಾಗಿರಬೇಕು, ಹಣಕಾಸು ವ್ಯವಸ್ಥೆ ಸಮಾದಲ್ಲಿ ಸರ್ಕ್ಯುಲೇಟ್ ಆಗುತ್ತಿದ್ದರೆ ದೇಶದ ಆರ್ಥಕ ವ್ಯವಸ್ಥೆ ಸದೃಢವಾಗುತ್ತದೆ ಎಂದರು.

ಮಾಲೀಕನಾಗುವುದು ಒತ್ತಡದ, ಸವಾಲಿನ ಕೆಲಸ, ಸರ್ಕಾರ ಎಫ್ ಕೆಸಿಸಿಐ ಜೊತೆ ನಿಲ್ಲುತ್ತದೆ ಎಂದರು. ರಾಮಾಯಣದಲ್ಲಿ ಸೀತೆಯ ಪಾತ್ರ ಹೆಚ್ಚು ಮಹತ್ವದ್ದು, ಆಕೆಯ ಹೋರಾಟ, ತ್ಯಾಗ, ಪರಿಶುದ್ಧತೆ ನಿಜಕ್ಕೂ ಅದ್ಬುತ, ಭಾರತದಲ್ಲಿ ಮೊದಲು ಹೆಣ್ಣು ದೇವತೆಗೆ ಪೂಜೆ ಮಾಡಿ ನಂತರ ದೇವರನ್ನು ಪೂಜಿಸುತ್ತೇವೆ, ಸಮಾಜದಲ್ಲಿ ಹೆಣ್ಣಿಗೆ ಅಷ್ಟು ಶಕ್ತಿಯಿದೆ, ಪೂಜನೀಯ ಭಾವನೆ ಇದೆ ಎಂದರು. ಸಮಾಜಲ್ಲಿ ಆರ್ಥಿಕತೆ ಬಲವಾಗಲು ಹಣ ಚಲನೆಯಲ್ಲಿರಬೇಕು, ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ಜಾರಿಗೆ ತಂದ 5 ಗ್ಯಾರಂಟಿ ಯೋಜನೆಗಳು ಮಹಿಳೆಯರ

# ಪಡಿತರ ಮಾನದಂಡ ಪರಿಷ್ಕರಣೆ



ನಿರ್ವಹಿಸಲಾಗುವುದು' ಎಂದು ಮಾಹಿತಿ ನೀಡಿದರು.

'ಎಲ್ಲ ನ್ಯಾಯಬೆಲೆ ಅಂಗಡಿಗಳಲ್ಲೂ ಇಪಿಒಎಸ್, ವಿದ್ಯುನ್ಮಾನ ತೂಕದ ಯಂತ್ರ ಮತ್ತು ಐಆರ್‌ಐಎಸ್ ಸ್ಕ್ಯಾನರ್ ಅಳವಡಿಸಲಾಗುವುದು. ಮೊದಲಿಗೆ ಪ್ರಾಯೋಗಿಕವಾಗಿ ಚಿಕ್ಕಬಳ್ಳಾಪುರ ಹಾಗೂ ಚಿತ್ರದುರ್ಗ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಿ, ನಂತರ ರಾಜ್ಯದಾದ್ಯಂತ ವಿಸ್ತರಿಸಲಾಗುವುದು' ಎಂದು ಹೇಳಿದರು.'ಬಯೊಮೆಟ್ರಿಕ್ ಜೊತೆಗೆ ಒಟಿಪಿ ಪರಿಶೀಲನಾ ವ್ಯವಸ್ಥೆ ಅಳವಡಿಕೆಗೆ ಚಿಂತಿಸಲಾಗಿದೆ. ನ್ಯಾಯಬೆಲೆ ಅಂಗಡಿಗಳ ಮಾಲೀಕರು ಗೋದಾಮುಗಳಿಂದ ಆಹಾರಧಾನ್ಯ ಎತ್ತುವಳಿ ಮಾಡಿದ ನಂತರ ಫಲಾನುಭವಿಗಳಿಗೆ ಎಸ್‌ಎಂಎಸ್ ಮೂಲಕ ಮಾಹಿತಿ ನೀಡುವ ವ್ಯವಸ್ಥೆ ತರಲಾಗುವುದು. ಬೆಂಗಳೂರು ನಗರದಲ್ಲಿ ವಲಸೆ ಕಾರ್ಮಿಕರಿಗೆ ಪಡಿತರವನ್ನು ಸಮರ್ಪಕವಾಗಿ ವಿತರಿಸಲು 'ಅನ್ನ ಎಟಿಎಂ' ಸ್ಥಾಪಿಸಲು ಚಿಂತನೆ ನಡೆದಿದೆ' ಎಂದು ತಿಳಿಸಿದರು.

'ನಗರದಲ್ಲಿ ಶೇ 50ರಷ್ಟು ಹಾಗೂ ಗ್ರಾಮೀಣ ಪ್ರದೇಶದಲ್ಲಿ ಶೇ 75ರಷ್ಟು ಮಂದಿ ಆಹಾರ ಭದ್ರತಾ ಕಾಯ್ದೆ ವ್ಯಾಪ್ತಿಗೆ ಬರಬೇಕಿದೆ. ಈ ನಿಟ್ಟಿನಲ್ಲಿ, ರಾಜ್ಯಕ್ಕೆ ಜನಸಂಖ್ಯೆ ಆಧರಿಸಿ ಪಡಿತರ ಹಂಚಿಕೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು. ಪಡಿತರ ಕಾಳಸಂತೆಯಲ್ಲಿ ಮಾರಾಟ ಆಗದಂತೆ ನಿಗಾ ವಹಿಸಲಾಗುವುದು. ಸುಧಾರಣೆ ಮೂಲಕ, ಕಡಿಮೆ ಸಮಯದಲ್ಲೇ ದೊಡ್ಡ ಬದಲಾವಣೆ ತರಲು ಯೋಜಿಸಲಾಗಿದೆ' ಎಂದರು.

'ವೈದ್ಯಕೀಯ ಚಿಕಿತ್ಸೆಯ ಕಾರಣಗಳಿಗಾಗಿ, ಮಾನದಂಡದ ಪ್ರಕಾರ ಇರುವವರಿಗೆ ತ್ವರಿತವಾಗಿ ಬಿಪಿಎಲ್ ಪಡಿತರ ಚೀಟಿ ವಿತರಿಸುವಂತೆ ಸೂಚಿಸಲಾಗಿದೆ.

# ಬಿಜೆಪಿಗೆ ತಿರುಗೇಟು ನೀಡಲು ಕಾಂಗ್ರೆಸ್‌ನಿಂದ ಜನಾಂದೋಲನ ಆಕ್ರೋಶ ಯಾತ್ರೆ



ಬಳ್ಳಾರಿ: ರಾಜ್ಯ ಬಿಜೆಪಿಯ ಪಾದಯಾತ್ರೆಗೆ ಪ್ರತಿಯಾಗಿ ಜನಾಂದೋಲನ ಆಕ್ರೋಶ ಯಾತ್ರೆ ನಡೆಸಲು ಕಾಂಗ್ರೆಸ್ ಭರ್ಜರಿ ಸಿದ್ಧತೆ ನಡೆಸಿದ್ದು, ಈ ಮೂಲಕ ಬಳ್ಳಾರಿಯಲ್ಲಿ ಮತ್ತೊಂದು ಹೈವೋಲ್ಟೇಜ್ ರಾಜಕೀಯ ಯಾತ್ರೆಗೆ ವೇದಿಕೆ ಸಿದ್ಧಗೊಂಡಿದೆ.

ಬಿಜೆಪಿಯ ಬಳ್ಳಾರಿ ಚಲೋ ಪಾದಯಾತ್ರೆಗೆ ತಕ್ಕ ತಿರುಗೇಟು ನೀಡಲು ಕಾಂಗ್ರೆಸ್ ನಾಯಕರು ಪ್ರತಿತಂತ್ರ ರೂಪಿಸಿದ್ದಾರೆ. ಬಿಜೆಪಿ ನಾಯಕರ ಆರೋಪಗಳಿಗೆ ನೇರವಾಗಿ ಜನರ ಮುಂದೆಯೇ ಉತ್ತರ ನೀಡಲು ನಿರ್ಧರಿಸಿರುವ ಕಾಂಗ್ರೆಸ್, ಬಿಜೆಪಿ ಪಾದಯಾತ್ರೆ ಸಾಗಿದ ಮಾರ್ಗದಲ್ಲೇ 'ಜನಾಂದೋಲನ ಆಕ್ರೋಶ ಯಾತ್ರೆ'ಯನ್ನು ಸಂಘಟಿಸಲು ಮುಂದಾಗಿದೆ. ಈ ಯಾತ್ರೆಗೆ ಅಂತಿಮ ರೂಪ ನೀಡುವ ಸಂಬಂಧ ಸ್ಥಳೀಯ ಕಾಂಗ್ರೆಸ್ ನಾಯಕರು ಪಕ್ಷದ ಹೈಕಮಾಂಡ್ ಜತೆ ಚರ್ಚೆ ನಡೆಸಲಿದ್ದಾರೆ. ಬಿಜೆಪಿ ಪಾದಯಾತ್ರೆ ಬಳ್ಳಾರಿ ತಲುಪುವ ಮುನ್ನವೇ ಈ ಕೌಂಟರ್ ಯಾತ್ರೆಯನ್ನು ಕಾರ್ಯರೂಪಕ್ಕೆ ತರಲು ಯೋಜನೆ ರೂಪಿಸಲಾಗಿದೆ. ಯಾತ್ರೆಯ ಆರಂಭಿಕ ಸಿದ್ಧತೆಯಾಗಿ ಮೊದಲ ಹಂತದಲ್ಲಿ ಪಕ್ಷದ ಪ್ರಮುಖ ಮುಖಂಡರು ಹಾಗೂ ಕಾರ್ಯಕರ್ತರ ಸಭೆ ನಡೆಸಿ ಅಭಿಪ್ರಾಯ ಸಂಗ್ರಹಿಸಲು ನಿರ್ಧರಿಸಲಾಗಿದೆ. ಆ ಬಳಿಕ ಪೂರ್ಣ ಪ್ರಮಾಣದ ಯಾತ್ರೆಯ ದಿನಾಂಕ ಮತ್ತು ರೂಪುರೇಷೆಗಳನ್ನು ಅಂತಿಮಗೊಳಿಸಲಾಗುತ್ತದೆ ಎಂದು ಪಕ್ಷದ ಮೂಲಗಳು ತಿಳಿಸಿವೆ

# ಎಸ್‌ಡಿಎಂಸಿ ಅಧ್ಯಕ್ಷರಾಗಿ ರಮೇಶ್ ಬಾರಿಕೆರ್ ಆಯ್ಕೆ



ಬಳ್ಳಾರಿ (ಕಂಪ್ಲಿ) ಜಿಲ್ಲೆಯ ಕಂಪ್ಲಿ ತಾಲೂಕಿನ ಎಮ್ಮಿಗನೂರು ಗ್ರಾಮದ ಕೆಪಿಎಸ್ ಶಾಲೆಯ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗೆ ಬಿ,ರಮೇಶ್ ಅವರನ್ನು ನೂತನ ಅಧ್ಯಕ್ಷರಾಗಿ ಮತ್ತು ಮರಿಸ್ವಾಮಿಯನ್ನು ಉಪಾಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ ಎಂದು ಶಾಲೆಯ ಮುಖ್ಯ ಗುರುಗಳು ತಿಳಿಸಿದ್ದಾರೆ.

ಶಾಸಕ ಜೆ.ಎನ್. ಗಣೇಶ್ ಅವರ ಆದೇಶದ ಮೇರೆಗೆ ಈ ಹಿಂದೆ ನೇಮಕವಾಗಿದ್ದ ಶ್ರೀ ಹೊಸಳ್ಳಿ ಜಡೇಶ ರವರ ಸ್ಥಾನಕ್ಕೆ ಬಿ,ರಮೇಶ್ ಅವರನ್ನು ಹಾಗೂ ಉಪಾಧ್ಯಕ್ಷರಾಗಿ ಮರಿಸ್ವಾಮಿಯನ್ನು ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರಾಗಿ ನೇಮಕ ಮಾಡಲಾಗಿದೆ.

ಈ ಹಿನ್ನೆಲೆಯಲ್ಲಿ ಬುಧವಾರ ಶಾಲೆ ಸಭಾಂಗಣದಲ್ಲಿ ಹೊಸಳ್ಳಿ ಜಡೆಶರವರಿಗೆ ಬೀಳ್ಕೊಡುಗೆ ಸಮಾರಂಭ ನೆಡೆಯಿತು ನಂತರ ಶಾಲೆಯ ಎಸ್‌ಡಿಎಂಸಿ ಸದಸ್ಯರ ನೇತೃತ್ವದಲ್ಲಿ, ಶಾಲೆಯ ಮುಖ್ಯಗುರುಗಳು ಹಾಗೂ ಗ್ರಾಮದ ಹಿರಿಯರ ಸಮ್ಮುಖದಲ್ಲಿ ರಮೇಶ್ ಬಾರಿಕೆರ್ ಅವರು ಕೆಪಿಎಸ್ ಶಾಲೆಯ ನೂತನ ಅಧ್ಯಕ್ಷರಾಗಿ ಪದಗ್ರಹಣ ಮಾಡಿದರು.ಈ ಸಂದರ್ಭದಲ್ಲಿ ಮುಖ್ಯಗುರುಗಳಾದ ಹುಲುಗಪ್ಪ. ಹಾಗೂ ಪ್ರಭಾರಿ ಪ್ರಾಂಶುಪಾಲರಾದ ವೀರೇಶ, ಶಾಲೆಯ ಎಸ್‌ಡಿಎಂಸಿ ಸದಸ್ಯರು, ಶಿಕ್ಷಕರು ಹಾಗೂ ಗ್ರಾಮದ ಮುಖಂಡರಾದ ಎಲ್ಲರ್ತಿ ರಾಘವೇಂದ್ರ ರೆಡ್ಡಿ. ಟಿ, ಪಿ ಜಡೇಪ್ಪ, ಶರಣ ಬಸವ ಗೌಡ, ಜಡೇಸಿದ್ದ ಸ್ವಾಮಿ ಸೇರಿದಂತೆ ಗ್ರಾಮದ ಶಿಕ್ಷಣ ಪ್ರೇಮಿಗಳು ನೂತನ ಅಧ್ಯಕ್ಷರಿಗೆ ಶುಭ ಹಾರೈಸಿದರು.

ಶಾಲೆಯ ಶೈಕ್ಷಣಿಕ ಅಭಿವೃದ್ಧಿ, ಮೂಲಸೌಕರ್ಯಗಳ ಸುಧಾರಣೆ ಹಾಗೂ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಸಮಿತಿಯೊಂದಿಗೆ ಕೈಜೋಡಿಸಿ ಕಾರ್ಯನಿರ್ವಹಿಸುವುದಾಗಿ ನೂತನ ಅಧ್ಯಕ್ಷರು ತಿಳಿಸಿದರು.

ರಮೇಶ್ ಬಾರಿಕೆರ್ ಅವರ ಆಯ್ಕೆಗೆ ಎಮ್ಮಿಗನೂರು ಗ್ರಾಮದ ಮುಖಂಡರು, ಪೋಷಕರು ಹಾಗೂ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.

# ಅನೈತಿಕ ಸಂಬಂಧದ ಶಂಕೆ; ಮಹಿಳೆಯ ಕುಟುಂಬಸ್ಥರಿಂದ ವ್ಯಕ್ತಿಯ ಭೀಕರ ಕೊಲೆ



ಗದಗ: ಅನೈತಿಕ ಸಂಬಂಧದ ಆರೋಪದ ಹಿನ್ನೆಲೆಯಲ್ಲಿ ವ್ಯಕ್ತಿಯೊಬ್ಬನನ್ನು ಕಬ್ಬಿಣದ ರಾಡ್‌ನಿಂದ ಹೊಡೆದು ಕೊಲೆ ಮಾಡಿರುವ ಘಟನೆ ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಪುಟಗಾಂವ್ ಬಡ್ನಿ ಗ್ರಾಮದಲ್ಲಿ ನಡೆದಿದೆ.

34 ವರ್ಷದ ಈರಣ್ಣ ಅಗಸಿಬಾಗಿಲು ಮೃತ ವ್ಯಕ್ತಿ. ಈರಣ್ಣ ಸ್ಥಳೀಯ ರೇಣುಕಾ ಎಂಬ ಯುವತಿ ಜೊತೆ ಅನೈತಿಕ ಸಂಬಂಧ ಹೊಂದಿದ್ದ ಎನ್ನಲಾಗಿದೆ.

ಈರಣ್ಣ ಹಾಗೂ ರೇಣುಕಾ ಇಬ್ಬರು ಒಟ್ಟಿಗೆ ಇದ್ದ ವೇಳೆ ರೇಣುಕಾಳ ಕುಟುಂಬಸ್ಥರು ರೆಡ್‌ಹ್ಯಾಂಡ್ ಆಗಿ ಹಿಡಿದಿದ್ದಾರೆ. ಈ ವೇಳೆ ನಾಲ್ವರು ಸೇರಿ ಈರಣ್ಣನ ತಲೆಗೆ ಕಬ್ಬಿಣದ ರಾಡ್‌ನಿಂದ ಬಲವಾಗಿ ಹೊಡೆದಿದ್ದು, ಗಂಭೀರವಾಗಿ ಗಾಯಗೊಂಡ ಈರಣ್ಣ ಮೃತಪಟ್ಟಿದ್ದಾನೆ.

ಈ ಪ್ರಕರಣದಲ್ಲಿ ರೇಣುಕಾ ಕಳಸಾಪೂರ (22), ಆಕೆಯ ಪತಿ ಆಂಜನೇಯ ಕಳಸಾಪೂರ (32), ರೇಣುಕಾಳ ತಾಯಿ ಹನುಮವ್ವ ಭೋವಿ (40) ಹಾಗೂ ಸಹೋದರ ಧರ್ಮರಾಜ್ ಭೋವಿ (24) ಆರೋಪಿಗಳು.

ಕೊಲೆ ಬಳಿಕ ಆರೋಪಿಗಳು ಈರಣ್ಣ ವಿರುದ್ಧವೇ ದೂರು ನೀಡಲು ಪೊಲೀಸ್ ಠಾಣೆಗೆ ತೆರಳಿದ್ದರು. ಆದರೆ, ವಿಚಾರಣೆ ವೇಳೆ ಪ್ರಕರಣದ ಸತ್ಯಾಂಶ ಪೊಲೀಸರಿಗೆ ತಿಳಿದುಬಂದಿದ್ದು, ನಾಲ್ವರು ಆರೋಪಿಗಳನ್ನು ಬಂಧಿಸಲಾಗಿದೆ.

# ರೇಣುಕಾಸ್ವಾಮಿ ಕೊಲೆ ಕೇಸ್ : ಮಾಫಿ ಸಾಕ್ಷಿ ಪ್ರದೋಷ್ ಹೇಳಿಕೆ ದಾಖಲು

ಬೆಂಗಳೂರು: ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ ಮಾಫಿ ಸಾಕ್ಷಿಯಾಗಿ ಪರಿಗಣಿಸಿರುವ 14ನೇ ಆರೋಪಿ ಪ್ರದೋಷ್ ಹೇಳಿಕೆ ದಾಖಲಿಸುವ ಪ್ರಕ್ರಿಯೆಯನ್ನು 59ನೇ ಸಿಸಿಹೆಚ್ ಕೋರ್ಟ್ ಮುಂದೂಡಿದೆ.

ಹೈಕೋರ್ಟ್‌ನಲ್ಲಿ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಆದೇಶ ಇನ್ನೂ ಹೊರಬಾರದ ಹಿನ್ನೆಲೆಯಲ್ಲಿ ವಿಚಾರಣೆಗೆ ಹೆಚ್ಚಿನ ಸಮಯ ನೀಡುವಂತೆ ವಿಶೇಷ ಸರ್ಕಾರಿ ಅಭಿಯೋಜಕ ಪ್ರಸನ್ನಕುಮಾರ್ ನ್ಯಾಯಾಲಯಕ್ಕೆ ಮನವಿ ಮಾಡಿದರು. ಪ್ರದೋಷ್ ಹೇಳಿಕೆ ದಾಖಲಿಸುವ ಪ್ರಕ್ರಿಯೆಯನ್ನು ಸೋಮವಾರಕ್ಕೆ ಮುಂದೂಡುವಂತೆ ಎಸ್‌ಪಿಪಿ ಪ್ರಸನ್ನಕುಮಾರ್ ಮನವಿ ಮಾಡಿದರು. ಎಸ್‌ಪಿಪಿ ಮನವಿಯನ್ನು ಪರಿಗಣಿಸಿದ ನ್ಯಾಯಾಲಯ, ಹೇಳಿಕೆ ದಾಖಲಿಸುವ ಪ್ರಕ್ರಿಯೆಯನ್ನು ಸೋಮವಾರಕ್ಕೆ ಮುಂದೂಡಿದೆ.

ಇಂದು ಎ14 ಆರೋಪಿ ಪ್ರದೋಷ್‌ನನ್ನು ಜೈಲು ಅಧಿಕಾರಿಗಳು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು. ನ್ಯಾಯಾಲಯಕ್ಕೆ ಆಗಮಿಸಿದ ಪ್ರದೋಷ್, ಅಗತ್ಯ ಪ್ರಕ್ರಿಯೆ ಪೂರ್ಣಗೊಳಿಸಿ ಸಹಿ ಮಾಡಿ ಹೊರಬಂದರು. ವಿಚಾರಣೆ



ಮುಂದೂಡಿಕೆಯಾದ ಹಿನ್ನೆಲೆಯಲ್ಲಿ ಪೊಲೀಸರು ಪ್ರದೋಷ್‌ನನ್ನು ಮತ್ತೆ ಜೈಲಿಗೆ ಕಳುಹಿಸಿದ್ದಾರೆ.

# ಎಇಇ ನೇಮಕಾತಿ ಅಕ್ರಮ। ಸರಣಿ ಪ್ರಶ್ನೆ ಕೇಳಿ ಪ್ರಿಯಾಂಕ್ ರಾಜೀನಾಮೆಗೆ ಹೆಚ್‌ಡಿಕೆ ಆಗ್ರಹ



ಬೆಂಗಳೂರು: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ನೇಮಕಾತಿಯಲ್ಲಿ ಭಾರೀ ಅಕ್ರಮ ನಡೆದಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಪುನರುಚ್ಚರಿಸಿದ್ದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಜೆ.ಪಿ. ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಕ್ರಮದ ಬಗ್ಗೆ ನನಗೆ ಗೊತ್ತೇ ಇಲ್ಲ ಎಂದಿರುವ ಪ್ರಿಯಾಂಕ್ ಖರ್ಗೆ ನೈತಿಕ ಹೊಣೆ ಹೊತ್ತು ತಕ್ಷಣವೇ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ನೇಮಕಾತಿಯಲ್ಲಿ ಅಕ್ರಮ ನಡೆದಿರುವುದು ನಿಮ್ಮ ಗಮನಕ್ಕೆ ಬಂದಿಲ್ಲ ಎಂದರೆ ಯಾರ ಕಿವಿಗೆ ಹೂ ಮುಡಿಸುತ್ತಿದ್ದೀರಿ? ಎಂದು ಖಾರವಾಗಿ ಪ್ರಶ್ನಿಸಿದ ಕುಮಾರಸ್ವಾಮಿ ಪ್ರಿಯಾಂಕ್ ಖರ್ಗೆ ನೇರ ಸವಾಲು ಹಾಕಿ ಹಲವು ಪ್ರಶ್ನೆಗಳನ್ನು ಮುಂದಿಟ್ಟು ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.

# ಬೆಂಗಳೂರು–ಚೆನ್ನೈ ಎಕ್ಸ್‌ಪ್ರೆಸ್ ವೇ: ಟಿಪ್ಪರ್‌ನಲ್ಲಿ ಆಕಸ್ಮಿಕ ಬೆಂಕಿ




ಕೋಲಾರ: ಬೆಂಗಳೂರು–ಚೆನ್ನೈ ಎಕ್ಸ್‌ಪ್ರೆಸ್ ವೇಯಲ್ಲಿ ಚಲಿಸುತ್ತಿದ್ದ ಟಿಪ್ಪರ್‌ನಲ್ಲಿ ಆಕಸ್ಮಿಕ ಬೆಂಕಿ ಕಾಣಿಸಿಕೊಂಡ ಪರಿಣಾಮ ಬೆಂಕಿಯ ಕೆನ್ನಾಲಿಗೆಗೆ ಟಿಪ್ಪರ್ ಸುಟ್ಟು ಕರಕಲಾದ ಘಟನೆ ಕೋಲಾರದಲ್ಲಿ ನಡೆದಿದೆ. ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲೂಕಿನ ಡಿ.ಕೆ.ಹಳ್ಳಿ ಪ್ಲಾಂಟೇಶನ್ ಬಳಿ ಈ ಘಟನೆ ನಡೆದಿದ್ದು, ಬೆಂಗಳೂರು–ಚೆನ್ನೈ ಎಕ್ಸ್‌ಪ್ರೆಸ್ ಕಾರಿಡಾರ್‌ನಲ್ಲಿ ಬೆಂಗಳೂರಿನಿಂದ ವಿ.ಕೋಟಗೆ ತೆರಳುತ್ತಿದ್ದ ವೇಳೆ ಈ ಘಟನೆ ನಡೆದಿದೆ. ಇನ್ನೂ ಇಂಜಿನ್‌ನಲ್ಲಿ ಶಾರ್ಟ್ ಸರ್ಕ್ಯೂಟ್ ಆಗಿ ಬೆಂಕಿ ಹೊತ್ತಿಕೊಂಡಿರುವ ಶಂಕೆ ವ್ಯಕ್ತವಾಗಿದ್ದು, ಚಾಲಕ ಸಂತೋಷ್ ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆ ಟಿಪ್ಪರ್ ನಿಲ್ಲಿಸಿ ಪ್ರಾಣಪಯದಿಂದ ಪಾರಾಗಿದ್ದಾನೆ. ಇನ್ನೂ ನಂಗಲಿ ಮೂಲದ ಸುರೇಶ್ ಎಂಬುವವರಿಗೆ ಸೇರಿದ ಟಿಪ್ಪರ್ ಇದಾಗಿದ್ದು, ಬೆಮೆಲ್ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ

# ಮಗುವನ್ನು ನದಿಗೆಸೆದು ಕೊಂದ ಪಾಪಿ ತಂದೆ

ಕಲಬುರಗಿ: ಹೆಂಡತಿ ಮೇಲಿನ ಸಿಟ್ಟಿಗೆ ವ್ಯಕ್ತಿಯೊಬ್ಬ 4 ವರ್ಷದ ಮಗುವನ್ನು ನದಿಗೆ ಎಸೆದು ಹತ್ಯೆ ಮಾಡಿದ ಘಟನೆ ಚಿಂಚೋಳಿ ತಾಲೂಕಿನ ಹಸರಗುಂಡಗಿ ಗ್ರಾಮದಲ್ಲಿ ನಡೆದಿದೆ. ಸೋಮರಾವ್ ಹೂಗಾರ್ ಮಗುವನ್ನು ಹತ್ಯೆಗೈದ ಆರೋಪಿಯಾಗಿದ್ದಾನೆ. ಈತ ಪತ್ನಿ ಕಲ್ಪನಾ ಜೊತೆ ಗಲಾಟೆ ಮಾಡಿಕೊಂಡಿದ್ದ. ಇದೇ ಸಿಟ್ಟಲ್ಲಿ ಕೆಲಕಾಲ ಮಗು ಗುಂಡೇಶ್‌ನನ್ನು ಎತ್ತಿಕೊಂಡು ಆಟವಾಡಿಸುತ್ತಾ ಕರೆದುಕೊಂಡು ಹೋಗಿ ನಾಗರಾಳ ಜಲಾಶಯಕ್ಕೆ ಎಸೆದಿದ್ದಾನೆ. ಈ ವಿಷಯ ತಿಳಿದ ಬಳಿಕ ಗಂಡನ ವಿರುದ್ಧ ಪತ್ನಿ ಕಲ್ಪನಾ ದೂರು ದಾಖಲಿಸಿದ್ದಾಳೆ. ಬಳಿಕ ಪೊಲೀಸರು ಮಗುವಿನ ಮೃತದೇಹವನ್ನು ಜಲಾಶಯದಿಂದ ಹೊರತೆಗೆದಿದ್ದಾರೆ. ಈ ಕುರಿತು ಚಿಂಚೋಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಒಂದನೇ ಪುಟದಿಂದ..

# ನೀವೇನ್ ದಾನ ಕೊಡ್ತಿಲ್ಲ.. ಪ್ರವಾಹಕ್ಕೆ ನೀವೇ ಕಾರಣ.. ಪರಿಹಾರ ಕೊಡಿ ಅಷ್ಟೇ: ನೇಪಾಳ ಖಡಕ್ ಆಗ್ರಹ!



ನೆರವಿಗಾಗಿ ನೇಪಾಳ ತನ್ನ ಪ್ರಯತ್ನವನ್ನು ಮತ್ತಷ್ಟು ಚುರುಕುಗೊಳಿಸಿದೆ.

ಏತನ್ಮಧ್ಯೆ ನೇಪಾಳದ ವಿದೇಶಾಂಗ ಸಚಿವ ಶಿಶಿರ್ ಖನಾಲ್, ಹವಾಮಾನ ಬಿಕ್ಕಟ್ಟಿಗೆ ನೇಪಾಳದ ಕೊಡುಗೆ ತುಲನಾತ್ಮಕವಾಗಿ ಅತ್ಯಲ್ಪವಾಗಿದ್ದರೂ, ಅದರ ಪರಿಣಾಮಗಳಿಂದ ಉಂಟಾಗುವ ಆರ್ಥಿಕ ಹೊರೆಯನ್ನು ದೇಶವೇ ಸಂಪೂರ್ಣವಾಗಿ ಭರಿಸಬೇಕೆಂದು ನಿರೀಕ್ಷಿಸುವುದು ಸರಿಯಲ್ಲ ಎಂದು ಹೇಳಿದ್ದಾರೆ.

"ಇದು ದಾನವಲ್ಲ" ಎಂದು ಹೇಳಿರುವ ಖನಾಲ್, ಪ್ರಮುಖ ಮಾಲಿನ್ಯಕಾರ ರಾಷ್ಟ್ರಗಳು ಹವಾಮಾನ ದುರಂತಗಳಿಂದ ಬಾಧಿತ ದೇಶಗಳಿಗೆ ನೆರವು ನೀಡುವುದು ನೈತಿಕ ಹಾಗೂ ಕಾನೂನುಬದ್ಧ ಹೊಣೆಗಾರಿಕೆ ಎಂದು ಪ್ರತಿಪಾದಿಸಿದ್ದಾರೆ. ಅಲ್ಲದೆ "ನಾವು ನಮ್ಮ ರಾಜತಾಂತ್ರಿಕ ಚೌಕಟ್ಟನ್ನು 'ನೆರವು'ಯಿಂದ 'ನ್ಯಾಯ ಮತ್ತು ಪರಿಹಾರ'ದತ್ತ ಬದಲಾಯಿಸುತ್ತಿದ್ದೇವೆ. ಇದು ದಾನದ ವಿಚಾರವಲ್ಲ; ಕಾನೂನು ಮತ್ತು ನೈತಿಕ ಹೊಣೆಗಾರಿಕೆಯ ಪ್ರಶ್ನೆ. ವಿಶ್ವದ ಅತಿ ಹೆಚ್ಚು ಹಸಿರುಮನೆ ಅನಿಲ ಹೊರಸೂಸುವ ಚೀನಾ, ಎರಡನೇ ಸ್ಥಾನದಲ್ಲಿರುವ ಅಮೆರಿಕ ಮತ್ತು ಮೂರನೇ ಸ್ಥಾನದಲ್ಲಿರುವ ಭಾರತ, ನೇಪಾಳದಂತಹ ಹವಾಮಾನ ಬದಲಾವಣೆಗೆ ಹೆಚ್ಚು ದುರ್ಬಲವಾಗಿರುವ ರಾಷ್ಟ್ರಗಳಿಗೆ ಪರಿಹಾರ ನೀಡುವಲ್ಲಿ ಐತಿಹಾಸಿಕ ಹೊಣೆಗಾರಿಕೆ ಹೊಂದಿವೆ" ಎಂದು ಖನಾಲ್ ದಿ ಕಠ್ಮಂಡು ಪೋಸ್ಟ್‌ಗೆ ನೀಡಿದ ಸಂದರ್ಶನದಲ್ಲಿ ಹೇಳಿದ್ದಾರೆ.

ನೇಪಾಳದ ಈ ಬೇಡಿಕೆ, ಹವಾಮಾನ ಬದಲಾವಣೆಯಿಂದ ಉಂಟಾಗುವ 'ನಷ್ಟ ಮತ್ತು ಹಾನಿ'ಗೆ ಸಂಬಂಧಿಸಿದ ಅಂತರರಾಷ್ಟ್ರೀಯ ವ್ಯವಸ್ಥೆಯೊಂದಿಗೆ ಸಂಪರ್ಕ ಹೊಂದಿದೆ. ಹವಾಮಾನ ಬದಲಾವಣೆಯಿಂದ ಉಂಟಾಗುವ ವಿನಾಶಕ್ಕೆ ಆರ್ಥಿಕ ನೆರವು ಪಡೆಯಲು ಅಭಿವೃದ್ಧಿಶೀಲ ಹಾಗೂ ದುರ್ಬಲ ರಾಷ್ಟ್ರಗಳಿಗೆ ಈ ವ್ಯವಸ್ಥೆ ನೆರವಾಗಲಿದೆ. ಹವಾಮಾನ ಬದಲಾವಣೆಯ ಪರಿಣಾಮದಿಂದ ನೇಪಾಳದಂತಹ ರಾಷ್ಟ್ರಗಳು ಅನುಭವಿಸುತ್ತಿರುವ ಅಸಮಾನ ಪ್ರಮಾಣದ ನಷ್ಟವನ್ನು ಇತ್ತೀಚಿನ ಪ್ರವಾಹಗಳು ಮತ್ತೊಮ್ಮೆ ತೋರಿಸಿವೆ ಎಂದು ನೇಪಾಳ ಸರ್ಕಾರ ಹೇಳಿದೆ.

# ರಾಜೀನಾಮೆ ಕೊಟ್ಟು ಚುನಾವಣೆ ಎದುರಿಸೋಣ: ಮಾಜಿ ಶಾಸಕ ಸುರೇಶ್‌ಬಾಬು ಟಾಂಗ್

ಸ್ಪೀಕರ್ ಅಪಾಯಿಂಟ್‌ಮೆಂಟ್ ತೆಗೆದುಕೊಂಡರೆ ಜನಾರ್ದನ ರೆಡ್ಡಿ ರಾಜೀನಾಮೆ ನೀಡಲು ಸಿದ್ಧರಿದ್ದಾರೆ. ತುಕಾರಾಂ ಕೂಡ ರಾಜೀನಾಮೆ ನೀಡುವ ಧೈರ್ಯ ತೋರಿಸಲಿ ಎಂದು ಅವರು ಹೇಳಿದರು.

ಜಲಾಶಯದಲ್ಲಿ ನೀರಿದ್ದರೂ ರೈತರಿಗೆ ನೀರು ಬಿಡದೆ ಕಾಂಗ್ರೆಸ್ ಸರ್ಕಾರ ರಾಜಕೀಯ ಮಾಡುತ್ತಿದೆ ಎಂದು ಸುರೇಶ್‌ಬಾಬು ಆರೋಪಿಸಿದರು. "ನಮ್ಮ ಸರ್ಕಾರ ಇದ್ದಾಗ ರೈತರಿಗೆ ನೀರಿನ ಸಮಸ್ಯೆಯೇ ಬಂದಿರಲಿಲ್ಲ" ಎಂದು ಹೇಳಿದರು.

ಕಳೆದ ಚುನಾವಣೆಯಲ್ಲಿ ಜನಾರ್ದನ ರೆಡ್ಡಿ ಹೊಸ ಪಕ್ಷ ಕಟ್ಟಿದ್ದರಿಂದ ತಮ್ಮ ಕುಟುಂಬದಲ್ಲಿ ಭಿನ್ನಾಭಿಪ್ರಾಯ ಉಂಟಾಗಿತ್ತು. ತಾವು ಸೇರಿದಂತೆ ಹಲವರು ಅವರಿಂದ ದೂರವಿದ್ದ ಕಾರಣ ಸೋಲು ಕಂಡಿದ್ದೇವೆ. "ಈಗ ನಾವೆಲ್ಲರೂ ಒಟ್ಟಾಗಿದ್ದೇವೆ. ನಮ್ಮನ್ನು ಸೋಲಿಸಿ ನೋಡಲಿ" ಎಂದು ಸುರೇಶ್‌ಬಾಬು ಸವಾಲು ಹಾಕಿದರು.

ಮೊಳಕಾಲ್ಮೂರು ಸ್ಪರ್ಧೆ ವಿಚಾರಕ್ಕೆ ತೆರೆ : ಮೊಳಕಾಲ್ಮೂರು ಕ್ಷೇತ್ರದಿಂದ ಸ್ಪರ್ಧಿಸುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದ ಅವರು, ನಾಯಕನಹಟ್ಟಿ ತಿಪ್ಪೇಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿದ್ದು ರಾಜಕೀಯ ಉದ್ದೇಶದಿಂದಲ್ಲ. ದೇವಸ್ಥಾನಕ್ಕೆ ಹೋಗಿದ್ದ ವೇಳೆ ಕಾರ್ಯಕರ್ತರು ಬಂದಿದ್ದರು. ತಾನು ಎಲ್ಲಿಯೂ ಅಭ್ಯರ್ಥಿ ಎಂದು ಹೇಳಿಲ್ಲ. ಇದಕ್ಕೆ ರಾಜಕೀಯ ಬಣ್ಣ ಕಟ್ಟಲಾಗಿದೆ ಎಂದು ಸ್ಪಷ್ಟನೆ ನೀಡಿದರು.

# ಬಳ್ಳಾರಿಯ ಚಲಾವಣೆ ಇಲ್ಲದ ಲೀಡರ್ಸ್.. ರೆಡ್ಡಿ, ರಾಮುಲು ವಿರುದ್ಧ ನಾಗೇಂದ್ರ ಕೆಂಡ



ಎಂದು ಸಾಬೀತಾಗಿರುವ, 420 ಕೇಸ್‌ಗಳನ್ನು ಎದುರಿಸುತ್ತಿರುವ ಜನಾರ್ದನರೆಡ್ಡಿ ಈಗ ಭ್ರಷ್ಟಾಚಾರದ ಬಗ್ಗೆ ಮಾತನಾಡುತ್ತಿರುವುದು ಭೂತದ ಬಾಯಲ್ಲಿ ಭಗವದ್ಗೀತೆ ಕೇಳಿದಂತಿದೆ. ನಿಮ್ಮ ಕಳ್ಳಾಟಗಳ ದಾಖಲೆಗಳು ನನ್ನ ಬಳಿಯೂ ಇವೆ. ಸಮಯ ಬಂದಾಗ ಬಿಚ್ಚಿಡುತ್ತೇನೆ ಎಂದು ನಾಗೇಂದ್ರ ಎಚ್ಚರಿಸಿದರು.

ವಾಲ್ಮೀಕಿ ನಿಗಮದ 187 ಕೋಟಿ ರೂ. ಪ್ರಕರಣದಲ್ಲಿ ನಾನು ಯಾವುದೇ ತಪ್ಪೆಸಗಿಲ್ಲ, ಎಲ್ಲಿಯೂ ಸಹಿ ಮಾಡಿಲ್ಲ. ಇದು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ ನಡೆದಿರುವ ಗೋಲ್ಮಾಲ್. ಪಕ್ಷ ಮತ್ತು ಸರ್ಕಾರಕ್ಕೆ ಮುಜುಗರವಾಗಬಾರದು ಎಂಬ ಕಾರಣಕ್ಕೆ ನಾನೇ ಸ್ವತಃ 10 ದಿನ ಮೊದಲೇ ಮುಖ್ಯಮಂತ್ರಿಗಳಿಗೆ ರಾಜೀನಾಮೆ ಸಲ್ಲಿಸಿದ್ದೆ. ನನ್ನ ರಾಜೀನಾಮೆಗೆ ಬಿಜೆಪಿಯವರು ಕ್ರೆಡಿಟ್ ತೆಗೆದುಕೊಳ್ಳುವುದು ಹಾಸ್ಯಾಸ್ಪದ ಎಂದರು.

ಜನಾರ್ದನರೆಡ್ಡಿಗೆ ತಾಕತ್ತಿದ್ದರೆ ಗಂಗಾವತಿ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ನನ್ನ ವಿರುದ್ಧ ಸ್ಪರ್ಧಿಸಲಿ. ಇನ್ನು ನಾಗೇಂದ್ರ ಸ್ಪರ್ಧಿಸುವ ಕಡೆ ನಾನೂ ಸ್ಪರ್ಧಿಸುತ್ತೇನೆ ಎಂದಿರುವ ಶ್ರೀರಾಮುಲುಗೂ ಸ್ವಾಗತ. 2028ರಲ್ಲೇ ಆಗಲಿ ಅಥವಾ ಯಾವಾಗಲಾದರೂ ಆಗಲಿ, ನಾನಾ-ನೀನಾ ಎಂದು ನೋಡೋಣ ಎಂದು ಸವಾಲೆಸೆದರು. ಜನಾರ್ದನರೆಡ್ಡಿ ಮಾಡಿದ ಪ್ರತಿಯೊಂದು ಹಗರಣದಲ್ಲೂ ಶ್ರೀರಾಮುಲುಗೆ ಶೇ. 10ರಷ್ಟು ಪಾಲು ಇತ್ತು ಎಂಬುದನ್ನು ಮರೆಯಬಾರದು. ರೆಡ್ಡಿ ಮಾತ್ರ ಜೈಲಿಗೆ ಹೋದರು, ರಾಮುಲು ತಪ್ಪಿಸಿಕೊಂಡರು. ತಮ್ಮ ಆತ್ಮಸಾಕ್ಷಿಯನ್ನು ಮುಟ್ಟಿ ನೋಡಿಕೊಳ್ಳಲಿ ಎಂದು ನೇರ ಆರೋಪ ಮಾಡಿದರು. ನಾನು ವಾಲ್ಮೀಕಿ ಸಮುದಾಯದವನು, ದಲಿತ, ಪಾಳೆಗಾರನೂ ಹೌದು. ಪಾಳೇಗಾರಿಕೆಯನ್ನು ಯಾವಾಗ, ಎಲ್ಲಿ ತೋರಿಸಬೇಕೋ ಅಲ್ಲಿ ತೋರಿಸುತ್ತೇನೆ. ಬಡವರ ಕಣ್ಣೀರು ಮತ್ತು ಶಾಪ ನಿಮ್ಮನ್ನು ಸುಮ್ಮನೆ ಬಿಡಲ್ಲ. 2028ರ ಚುನಾವಣೆಯಲ್ಲಿ ಬಳ್ಳಾರಿ ಜಿಲ್ಲೆಯ 10ಕ್ಕೆ 10 ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ ನಾಗೇಂದ್ರ, ಬಿಜೆಪಿ ನಡೆಸುತ್ತಿರುವ ಪಾದಯಾತ್ರೆಗೆ ಜನರೇ ತಕ್ಕ ಪಾಠ ಕಲಿಸಲಿದ್ದಾರೆ ಎಂದು ತಿರುಗೇಟು ನೀಡಿದರು.

ಅನಂತ ಜನಶಕ್ತಿ ಕನ್ನಡ ದಿನ ಪತ್ರಿಕೆಯನ್ನು ಪ್ರೋತ್ಸಾಹಿಸಿ

# ಇಂದಿರಾನಗರ ವಲಯ ಮಟ್ಟದ ಕ್ರೀಡಾಕೂಟ ಆರಂಭ

ಬಳ್ಳಾರಿ : ಶಾಲಾ ಶಿಕ್ಷಣ ಇಲಾಖೆ ಹಾಗೂ ಇಂದಿರಾನಗರ, ಪಾರ್ವತಿ ನಗರ ಮತ್ತು ಕೋಟೆ ಕ್ಲಸ್ಟರ್‌ಗಳ ಹಿರಿಯ ಪ್ರಾಥಮಿಕ ಶಾಲೆಗಳ ಸಂಯುಕ್ತಾಶ್ರಯದಲ್ಲಿ ಪ್ರಸಕ್ತ ಸಾಲಿನ ಇಂದಿರಾನಗರ ವಲಯ ಮಟ್ಟದ ಎರೆಡು ದಿನಗಳ ಹಿರಿಯ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು ಆರಂಭಗೊಂಡಿತು.

ಕ್ರೀಡಾಕೂಟದಲ್ಲಿ 100 ಮತ್ತು 400 ಮೀಟರ್ ಓಟ, ರಿಲೇ, ಖೋಖೋ, ಕಬಡ್ಡಿ, ವಾಲಿಬಾಲ್, ಥ್ರೋಬಾಲ್, ತಟ್ಟೆ ಎಸೆತ, ಗುಂಡೆ ಎಸೆತ, ಲಾಂಗ್ ಜಂಪ್ ಸೇರಿದಂತೆ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. 300 ಕ್ಕೂ ಹೆಚ್ಚು ಕ್ರೀಡಾಪಟುಗಳು ಪಾಲ್ಗೊಂಡಿದ್ದಾರೆ.

ಸ್ಪರ್ಧೆಗಳಲ್ಲಿ ಗೆಲುವು ಸಾಧಿಸಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ, ಸ್ಮರಣಿಕೆ ಬಹುಮಾನಗಳನ್ನು ವಿತರಿಸಲಾಯ್ತು.

ಕಾರ್ಯಕ್ರಮದಲ್ಲಿ ತಾಲೂಕು ಶಿಕ್ಷಕರ ಸಂಘದ ಅಧ್ಯಕ್ಷ ನಿಂಗಪ್ಪ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಕೊಟ್ರೇಶ್, ಗೌರವಾಧ್ಯಕ್ಷ ಚಿನ್ನಮಾರಣ್ಣ, ಜಿಲ್ಲಾ ಸಂಘದ ಕಾರ್ಯದರ್ಶಿ ಕೃಷ್ಣಮೂರ್ತಿ, ತಾಲೂಕು ಪರಿವೀಕ್ಷಕರಾದ ಪದ್ಮಾರೆಡ್ಡಿ, ದೈಹಿಕ ಶಿಕ್ಷಕರ ಅಧ್ಯಕ್ಷ ವೀರನಗೌಡ, ಇಂದಿರಾನಗರ ವಲಯ ಕಾರ್ಯದರ್ಶಿ ಶಾಂತಕುಮಾರಿ, ತಾಲೂಕು ಪ್ರಾಥಮಿಕ ಶಿಕ್ಷಕರಾದ ತುಕಾರಾಂ, ತಾಲೂಕು ಕಾರ್ಯದರ್ಶಿ ಶಿವಶಂಕರ್, ಸಂಘಟನಾ ಕಾರ್ಯದರ್ಶಿ ಬಸವರಾಜ್, ಸಿಆರ್‌ಪಿ ಸಿದ್ದಪ್ಪ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



# ಹಳ್ಳಿ ಹಳ್ಳಿಗೂ ಪರಿಷತ್ ಕಾರ್ಯ ಚಟುವಟಿಕೆಗೆ ಶ್ಲಾಘನೀಯ




ಬಳ್ಳಾರಿ : ಹಳ್ಳಿಹಳ್ಳಿಗೂ ಪರಿಷತ್ತಿನ ಕಾರ್ಯಚಟುವಟಿಕೆಗಳು ತಲುಪುತ್ತಿರುವುದು ಶ್ಲಾಘನೀಯ ಎಂದು ಬಳ್ಳಾರಿಯ ಸೈಬರ್ ಕ್ರೈಂ ಇನ್ಸ್‌ಪೆಕ್ಟರ್ ಶ್ರೀಮತಿ ಗಾಯತ್ರಿ ಅಭಿಪ್ರಾಯಪಟ್ಟರು.

ಕಸಾಪ ಜಿಲ್ಲಾ ಘಟಕವು ಹಂದಿಹಾಳು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಆಯೋಜಿಸಿದ್ದ ದಿ. ಪಟೇಲ ಬಸವರಾಜ ಸ್ಮಾರಕ ದತ್ತಿ ಹಾಗೂ ದಿ. ವೈ. ಲಿಂಗಾರೆಡ್ಡಿ ಮತ್ತು ಪಾರ್ವತಮ್ಮ ದತ್ತಿ ಕಾರ್ಯಕ್ರಮ ಹಾಗೂ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಹಿರಿಯ ರಂಗಕಲಾವಿದ ಪುರುಷೋತ್ತಮ ಹಂದ್ಯಾಳು ಅವರಿಗೆ ಪರಿಷತ್ತಿನ ಗೌರವ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಾ ಹಂದಿಹಾಳು ಗ್ರಾಮದ ಪ್ರತಿಭೆಗಳು ಸಮಾಜದ ವಿವಿಧ ಕ್ಷೇತ್ರಗಳಿಗೆ ಅನುಪಮ ಕೊಡುಗೆ ನೀಡಿದ್ದಾರೆ. ಆ ಸಾಲಿನಲ್ಲಿ ರಂಗಭೂಮಿಯ ಚಟುವಟಿಕೆಗಳ ಮೂಲಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಪುರುಷೋತ್ತಮ ಹಂದ್ಯಾಳು ಗ್ರಾಮದ ಕೀರ್ತಿಯನ್ನು ಹೆಚ್ಚಿಸಿದ್ದಾರೆ ಎಂದು ಶ್ರೀಮತಿ ಗಾಯತ್ರಿ ನುಡಿದರು.

ಕುವೆಂಪು ಮಕ್ಕಳ ಸಾಹಿತ್ಯ ಕುರಿತು ವೀರಶೈವ ಕಾಲೇಜಿನ ಕನ್ನಡ ಉಪನ್ಯಾಸಕರಾದ ಡಾ. ನೀಲಮ್ಮ ವಿಶೇಷ ಉಪನ್ಯಾಸ ನೀಡಿದರು.

ದತ್ತಿ ದಾನಿಗಳಾದ ಖ್ಯಾತ ವೈದ್ಯರು ಡಾ. ಅರವಿಂದ ಪಟೇಲ ಮಾತನಾಡಿ ತಮ್ಮ ತಂದೆಯವರ ಹೆಸರಿನಲ್ಲಿ ನೀಡಿದ ದತ್ತಿ ದಾನವು ಜ್ಞಾನದಾಸೋಹದ ಮೂಲಕ ಸಾರ್ಥಕ ಗೊಳ್ಳುತ್ತಿರುವುದು ಪರಿಷತ್ತಿನ ಬಗ್ಗೆ ಅತೀವ ಹೆಮ್ಮೆಮೂಡಿಸದೆ ಎಂದರು. ವೇದಿಕೆಯಲ್ಲಿ ಕ.ಸಾ.ಪ ಜಿಲ್ಲಾ ಅಧ್ಯಕ್ಷ ಡಾ. ನಿಷ್ಠಿ ರುದ್ರಪ್ಪ, ನಿವೃತ್ತ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಮಲ್ಲಿಕಾರ್ಜುನಯ್ಯ ಹಿರೇಮಠ ವೇದಿಕೆ ಉದ್ದೇಶಿಸಿ ಮಾತನಾಡಿದರು. ಮುಖ್ಯಗುರುಗಳಾದ ಶ್ರೀಮತಿ ಶಶಿರೇಖಾ ಎಸ್, ಕಸಾಪ ಜಿಲ್ಲಾ ಸಂಚಾಲಕ ಕಪ್ಪಗಲ್ಲು ಬಿ ಚಂದ್ರಶೇಖರಚಾರ್, ಕಥೆಗಾರ ವೀರೇಂದ್ರ ರಾವಿಹಾಳ್ ವೇದಿಕೆಯಲ್ಲಿ ಉಪಸ್ಥಿತರಿದ್ದರು

ಶಾಲಾಭಿವೃದ್ಧಿ ಸಮಿತಿಯ ಅಧ್ಯಕ್ಷ ಬಿ. ವೆಂಕಟೇಶ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು.

ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ರಂಗಕಲಾವಿದ ಪುರುಷೋತ್ತಮ ಹಂದ್ಯಾಳು ಅವರಿಗೆ ,"ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಪುರಸ್ಕಾರ" ನೀಡಿ ಗೌರವಿಸಲಾಯಿತು. ನಿವೃತ್ತ ಡಿಡಿಪಿಐ ಮಲ್ಲಿಕಾರ್ಜುನಯ್ಯ ಹಿರೇಮಠ ಅವರನ್ನು ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಪುರುಷೋತ್ತಮ ಹಂದ್ಯಾಳು ಮಾತನಾಡಿ ಪರಿಷತ್ತು ಸಾಹಿತಿ ಮತ್ತು ವಿವಿಧ ಕ್ಷೇತ್ರಗಳ ಕಲಾವಿದರಿಗೆ ಅವರ ಪ್ರತಿಭೆಯನ್ನು ಗುರುತಿಸಿ ಗೌರವಿಸುವ ಮೂಲಕ ಅವರನ್ನು ಪ್ರೋತ್ಸಾಹಿಸುತ್ತಿದೆ ಎಂದರು. ಕಸಾಪ ಜಿಲ್ಲಾ ಗೌರವ ಕಾರ್ಯದರ್ಶಿಗಳಾದ ಡಾ. ಕೆ ಶಿವಲಿಂಗಪ್ಪ ಹಂದಿಹಾಳು ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀಮತಿ ಮಹಿಮ ಎಂ.ಸಿ. ಇವರು ಕಾರ್ಯಕ್ರಮ ನಿರೂಪಿಸಿದರು.ಶ್ರೀಮತಿ ನಾಹೀದಾ ಅಂಜುಮ್ ಪ್ರಾರ್ಥನೆ ಸಲ್ಲಿಸಿದರು. ಶಿಕ್ಷಕರಾದ ಗಾದಿಲಿಂಗಪ್ಪ.ಜೆ ಸ್ವಾಗತಿಸಿದರು. ಶಿಕ್ಷಕಿ ಈರಮ್ಮ.ಎನ್. ವಂದನಾರ್ಪಣೆ ಸಲ್ಲಿಸಿದರು.

# ಕ್ಷಯ ರೋಗಿಗಳಿಗೆ ಪೌಷ್ಠಿಕ ಧಾನ್ಯ ಕಿಟ್ ವಿತರಣೆ

ಹಗರಿಬೊಮ್ಮನಹಳ್ಳಿ : ಪಟ್ಟಣದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆ ಯಲ್ಲಿ ಮಂಗಳವಾರ 80 ಕ್ಷಯ ರೋಗಿಗಳಿಗೆ ಸಲಾಂ ಇಂಡಿಯಾ ಪೌಂಡೇಷನ್ ವತಿಯಿಂದ ಪೌಷ್ಠಿಕ ದಾನ್ಯ ಕಿಟ್ ವಿತರಣೆ ಮಾಡಿದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಯು . ಕೆ. ಕೊಟ್ರೇಶ್ ಮಾತನಾಡಿದರು. ಮುಖ್ಯ ಅತಿಥಿಯಾಗಿ ಭಾಗವಹಿಸಿ ಪತ್ರಕರ್ತ ಬುಡ್ಡಿ ಬಸವರಾಜ್ ಮಾತನಾಡಿ ಕ್ಷಯ ರೋಗ ದೊಡ್ಡ ರೋಗ ಅಲ್ಲ ನಿಮ್ಮ ಚಟಗಳಿಂದ ನೀವು ದೂರ ಇದ್ದಾಗ ಮಾತ್ರ ಗುಣ ಮುಖರಾಗಬಹುದು. ಜೊತೆಗೆ ಪೌಷ್ಠಿಕ ಆಹಾರ ನೀಡುವ ಮೂಲಕ ಸಲಾಂ ಇಂಡಿಯಾ ಪೌಂಡೇಷನ್ ಮಾದರಿಯಾಗಿದೆ. ಹಿಂದೆ ಇಂತಹ ಹಲವಾರು ಸೇವೆ ಮಾಡುವ ಈ ಸಂಸ್ಥೆ ಯಲ್ಲಿ ನಿಸ್ವಾರ್ಥ ಸೇವೆ ಮಾಡುವ ಇದಾಯಿತ್ ಒಬ್ಬ ಪ್ರಾಮಾಣಿಕ ವ್ಯಕ್ತಿ ಅಂದರು ತಪ್ಪುಲ್ಲ, ಇನ್ನು ಹಲವಾರು ಸೇವೆ ಗಳು ಬಡವರಿಗೆ ದೊರಕಲಿ ಎಂದರು.

ಆಸ್ಪತ್ರೆ ಯ ಮುಖ್ಯ ವೈದ್ಯಧಿಕಾರಿ ಡಾ. ಶಿವಕುಮಾರ್, ಫಿಜಿಸನ್ ಡಾ. ವಿನಯ್ ಕುಮಾರ್,ಜಿಲ್ಲಾ ಅರೋಗ್ಯ ನಿರೀಕ್ಷಣಾಧಿಕಾರಿ ಧರ್ಮನಗೌಡ ಮಾತನಾಡಿದರು.



ಕಾರ್ಯಕ್ರ ಮದ ಅಧ್ಯಕ್ಷತೆ ವಹಿಸಿ ಡಾ.ಪ್ರವೀಣ್ ಕುಮಾರ್ ಮಾತನಾಡಿ ಕ್ಷಯ ರೋಗಿಗಳು ಮಧ್ಯದಲ್ಲೇ ಔಷಧ ನಿಲ್ಲಿಸದಂತೆ ನಿರಂತರವಾಗಿ ಅವರ ಆರೋಗ್ಯವನ್ನು ವಿಚಾರಿಸಿ, ಚಿಕಿತ್ಸೆ ಪೂರ್ಣಗೊಳಿಸಲು ಮಾನಸಿಕ ಧೈರ್ಯ ತುಂಬಬೇಕು.

ಖಾಸಗಿ ರಂಗ, ದಾಸೋಹ ಸಂಸ್ಥೆಗಳು ಮತ್ತು ಎನ್.ಜಿ.ಒಗಳ ಈ ಜಂಟಿ ಪಾಲುದಾರಿಕೆಯು ದೇಶದಲ್ಲಿ ಕ್ಷಯರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಅವರ ಬಹುದೊಡ್ಡ ಶಕ್ತಿಯಾಗಿದೆ ಎಂದರು. ಈ ಸಂದರ್ಭದಲ್ಲಿ ಸಲಾಂ ಇಂಡಿಯಾ ಪೌಂಡೇಷನ್ ಕಾರ್ಯಕರ್ತ ಗುಜರಿ ಇದಾಯಿತ್, ಅರೋಗ್ಯ ನಿರೀಕ್ಷ ಶ್ರೀನಿವಾಸ್ ರೆಡ್ಡಿ,ಶಿವಲಿಂಗಪ್ಪ ಯಮುನಮ್ಮ ನಿರ್ವಹಿಸಿದರು. ಲಿಂಗರಾಜ್ ಯಾದವ್, ಆಂಬುಲೆನ್ಸ್ ನಜೀರ್,ಇದ್ದರು

# 15ನೇ ಹಣಕಾಸು ಆಯೋಗದ ಅನುದಾನ ಬಿಡುಗಡೆಗೆ ಮೇಯರ್ ಗಾದೆಪ್ಪ ಮನವಿ

ಬಳ್ಳಾರಿ : ಇಲ್ಲಿನ ಮಹಾನಗರ ಪಾಲಿಕೆಗೆ 2025-26ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನದಡಿ ರೂ.20.74 ಕೋಟಿ ಅನುದಾನ ಹಂಚಿಕೆಯಾಗಿದ್ದು. ಇದನ್ನು ಬಿಡುಗಡೆ ಮಾಡುವಂತೆ ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರಿಗೆ ಮೇಯರ್ ಪಿ.ಗಾದೆಪ್ಪ ಮನವಿ ಮಾಡಿದ್ದಾರೆ.

ಅವರು ನಿನ್ನೆ ತೋರಣಗಲ್ಲಿನ ಜಿಂದಾಲ್ ವಿಮಾನ ನಿಲ್ದಾಣದಲ್ಲಿ ಸಚಿವರನ್ನು ಆಯುಕ್ತ ಪಿ.ಎಸ್. ಮಂಜುನಾಥ್ ಹಾಗು ಪಾಲಿಕೆ ಸದಸ್ಯರೊಂದಿಗೆ ಭೇಟಿಮಾಡಿ, ಈ ಅನುದಾನಕ್ಕೆ ನಿಯಮಾನುಸಾರ ಕ್ರಿಯಾ ಯೋಜನೆಯನ್ನು ತಯಾರಿಸಿ ಕಾಮಗಾರಿಗಳಿಗೆ ಟೆಂಡರ್ ಕರೆದು, ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಆದರೆ ಇಲ್ಲಿಯವರೆಗೂ 1ಹಾಗೂ 2ನೇ ಕಂತಿನ ಹಣ ಬಿಡುಗಡೆಯಾಗಿಲ್ಲ. ಕಾಮಗಾರಿ ಪೂರ್ಣಗೊಳಿಸಿದ ಗುತ್ತಿಗೆದಾರರಿಗೆ ಬಿಲ್ಲುಗಳನ್ನು ಪಾವತಿಸಬೇಕಾಗಿದೆ. ಸದರಿ ರೂ.20.74 ಕೋಟಿ ಅನುದಾನವನ್ನು ಪಾಲಿಕೆಗೆ ಬಿಡುಗಡೆ ಮಾಡಲು. ಜೊತೆಗೆ 16ನೇ ಹಣಕಾಸು ಆಯೋಗದ ಅನುದಾನದಲ್ಲಿ ಕ್ರಿಯಾ ಯೋಜನೆ ತಯಾರಿಸಲು ನಗರಾಭಿವೃದ್ಧಿ ಇಲಾಖೆಯಿಂದ ಸೂಕ್ತ



# ಶಾಲೆಯಲ್ಲೇ ಹೃದಯಾಘಾತ; 9ನೇ ತರಗತಿ ವಿದ್ಯಾರ್ಥಿ ದಾರುಣ ಸಾವು

ಮಂಡ್ಯ: ಶಾಲೆಯಲ್ಲಿ ಮಧ್ಯಾಹ್ನದ ಬಿಸಿಯೂಟ ಸೇವಿಸುತ್ತಿದ್ದ ವೇಳೆ 9ನೇ ತರಗತಿ ವಿದ್ಯಾರ್ಥಿಯೊಬ್ಬ ಹೃದಯಾಘಾತದಿಂದ ಸಾವನ್ನಪ್ಪಿರುವ ಘಟನೆ ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಸೋಮನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಸೋಮನಹಳ್ಳಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ವೀರಮಣಿ (14) ಮೃತ ದುರ್ದೈವಿ. ಮಧ್ಯಾಹ್ನ ಶಾಲೆಯಲ್ಲಿ ಎಂದಿನಂತೆ ಇತರ ಮಕ್ಕಳೊಂದಿಗೆ ಬಿಸಿಯೂಟ ಮಾಡುತ್ತಿದ್ದಾಗ ವೀರಮಣಿ ಏಕಾಏಕಿ ಮೂರ್ಛೆಹೋಗಿ ಕೆಳಗೆ ಬಿದ್ದಿದ್ದಾನೆ. ತಕ್ಷಣ ಎಚ್ಚೆತ್ತ ಶಿಕ್ಷಕರು ಆತನನ್ನು ಸ್ಥಳೀಯ ಮದ್ದೂರು ಸಾರ್ವಜನಿಕ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಆದರೆ, ಬಾಲಕನ ಸ್ಥಿತಿ ಗಂಭೀರವಾಗಿದ್ದ ಕಾರಣ, ವೈದ್ಯರ ಸಲಹೆಯಂತೆ ಹೆಚ್ಚಿನ ಚಿಕಿತ್ಸೆಗಾಗಿ ಮಂಡ್ಯದ ಮಿಮ್ಸ್ ಆಸ್ಪತ್ರೆಗೆ ದಾಖಲಿಸಲಾಯಿತು.

ದುರದೃಷ್ಟವಶಾತ್, ಮಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಬಾಲಕ ಕೊನೆಯುಸಿರೆಳೆದಿದ್ದಾನೆ.

ತಪಾಸಣೆ ನಡೆಸಿದ ವೈದ್ಯರು, ಬಾಲಕ ತೀವ್ರ ಹೃದಯಾಘಾತದಿಂದ ಮೃತಪಟ್ಟಿರುವುದಾಗಿ ದೃಢಪಡಿಸಿದ್ದಾರೆ. ಚಿಕ್ಕ ವಯಸ್ಸಿನಲ್ಲೇ ಶಾಲಾ ಬಾಲಕ ಹೃದಯಾಘಾತಕ್ಕೆ ಬಲಿಯಾಗಿರುವುದು ಗ್ರಾಮಸ್ಥರಲ್ಲಿ ಆಘಾತ ಮೂಡಿಸಿದ್ದು, ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿದೆ

# ಸರ್ಕಾರಿ ಕಚೇರಿಗಳಿಗೆ ಅಲೆದಾಟ ತಪ್ಪಿಸಲು 'ಪ್ರಜಾಸೇವಾ ಆಂದೋಲನ' ಕಾರ್ಯಕ್ರಮ : ತಹಶೀಲ್ದಾರ್ ವೈ ರವಿ




ಪಾವಗಡ : ಸಾರ್ವಜನಿಕರು ತಮ್ಮ ಕುಂದುಕೊರತೆಗಳು ಹಾಗೂ ವಿವಿಧ ಕೆಲಸ-ಕಾರ್ಯಗಳಿಗಾಗಿ ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸುವ ಉದ್ದೇಶದಿಂದ ಮುಖ್ಯಮಂತ್ರಿಗಳು 'ಪ್ರಜಾಸೇವಾ ಆಂದೋಲನ' ಎಂಬ ವಿನೂತನ ಯೋಜನೆಯನ್ನು ಜಾರಿಗೆ ತಂದಿದ್ದಾರೆ ಎಂದು ತಹಶೀಲ್ದಾರ್ ವೈ ರವಿ ಯವರು ತಿಳಿಸಿದರು

ತಾಲ್ಲೂಕು ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಪ್ರಜಾಸೇವಾ ಆಂದೋಲನಾ ಕಾರ್ಯಕ್ರಮ ಪ್ರತಿ ತಿಂಗಳ ಒಂದನೇ ಮತ್ತು ಮೂರನೇ ಶನಿವಾರ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಕಾರ್ಯಕ್ರಮ ಹಾಗೂ ಉಳಿದ ದಿನಗಳಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ಹೋಬಳಿ ಮಟ್ಟದ ಕಾರ್ಯಕ್ರಮಗಳು ನಡೆಯಲಿವೆ,ಈ ಯೋಜನೆಯಡಿ ಎರಡು ಪ್ರತ್ಯೇಕ ಪೋರ್ಟಲ್‌ಗಳನ್ನು ಸಜ್ಜುಗೊಳಿಸಲಾಗಿದೆ,

ಮೊದಲನೇ ಪೋರ್ಟಲ್ ಸಾರ್ವಜನಿಕರು ತಮ್ಮ ಕುಂದುಕೊರತೆ ಹಾಗೂ ದೂರುಗಳನ್ನು ನೇರವಾಗಿ ಅಪ್‌ಲೋಡ್ ಮಾಡಲು ಅವಕಾಶವಿದೆ,ಎರಡನೇ ಪೋರ್ಟಲ್ ಸಾರ್ವಜನಿಕರು ಈ ಹಿಂದೆ ಸಲ್ಲಿಸಿರುವ ಅರ್ಜಿಗಳ ಸ್ವೀಕೃತಿ ಸಂಖ್ಯೆಯನ್ನು ಅಪ್‌ಲೋಡ್ ಮಾಡಿ, ಬಾಕಿ ಇರುವ ಕೆಲಸಗಳಿಗೆ ತ್ವರಿತ ಪರಿಹಾರ ಕಂಡುಕೊಳ್ಳಬಹುದು

ಹೋಬಳಿ ಮಟ್ಟದಲ್ಲಿ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ 'ಪ್ರಜಾಸೇವಾ ಆಂದೋಲನ' ಹಮ್ಮಿಕೊಳ್ಳಲು ಸೂಚನೆ ಬಂದಿದೆ. ಅದರಂತೆ ನಮ್ಮ ತಾಲೂಕಿನ ಮೊದಲ ಪ್ರಜಾಸೇವಾ ಆಂದೋಲನ ಕಾರ್ಯಕ್ರಮವನ್ನು ದಿನಾಂಕ 05-09-2026 ರ ಶನಿವಾರದಂದು ವೈ ಎನ್ ಹೊಸಕೋಟೆ ಹೋಬಳಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಸಭೆಯಲ್ಲಿ ಸಾರ್ವಜನಿಕರಿಂದ ಸ್ವೀಕೃತವಾಗುವ ಅರ್ಜಿಗಳನ್ನು ಪ್ರತಿ ಬುಧವಾರ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪರಿಶೀಲಿಸಲಾಗುವುದು. ತಾಲೂಕು ಮಟ್ಟದಲ್ಲಿ ಇತ್ಯರ್ಥವಾಗುವ ಕೆಲಸಗಳನ್ನು ತಕ್ಷಣ ಮಾಡಿಕೊಡಲಾಗುವುದು ಹಾಗೂ ಉನ್ನತ ಮಟ್ಟದ ನಿರ್ಧಾರ ಅಗತ್ಯವಿರುವ ದೂರುಗಳನ್ನು ಮೇಲಾಧಿಕಾರಿಗಳಿಗೆ ಶಿಫಾರಸು ಮಾಡಲಾಗುವುದು ಪ್ರಜಾಸೇವಾ ಆಂದೋಲನ ಕಾರ್ಯಕ್ರಮಕ್ಕೆ ಎಲ್ಲಾ ಇಲಾಖೆಗಳ ತಾಲೂಕು ಮಟ್ಟದ ಮುಖ್ಯ ಅಧಿಕಾರಿಗಳೇ ಕಡ್ಡಾಯವಾಗಿ ಭಾಗವಹಿಸಬೇಕು. ಯಾವುದೇ ಕಾರಣಕ್ಕೂ ತಮ್ಮ ಬದಲಿಗೆ ಆಧೀನ ಅಧಿಕಾರಿಗಳನ್ನು ಕಳುಹಿಸಿಕೊಡಲು ಅವಕಾಶವಿಲ್ಲ ಎಂದು ಈಗಾಗಲೇ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ,ಕಾರ್ಯಕ್ರಮದ ಕುರಿತು ಸಾರ್ವಜನಿಕರಿಗೆ ಮಾಹಿತಿ ತಲುಪಿಸಲು ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತ ಅಧಿಕಾರಿಗಳು, ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಾರ್ವಜನಿಕರ ಮನೆ ಮನೆಗೆ ತೆರಳಿ ಮುಖ್ಯಮಂತ್ರಿಗಳ ಸಂದೇಶ ಮತ್ತು ಅರ್ಜಿ ನಮೂನೆಗಳನ್ನು ತಲುಪಿಸುತ್ತಿದ್ದಾರೆ. ಸಾರ್ವಜನಿಕರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ಈ ಕಾರ್ಯಕ್ರಮಕ್ಕೆ ಆಗಮಿಸಿ ಇದರ ಸೌಲಭ್ಯ ಪಡೆಯಬೇಕು ಎಂದು ತಹಶೀಲ್ದಾರ್ ವೈ ರವಿ ಯವರು ತಿಳಿಸಿದರು

# ಬಳ್ಳಾರಿ ನಗರವೇ ನನ್ನ ಕ್ಷೇತ್ರ ಮುಂದಿನ ಚುನಾವಣೆಯಲ್ಲಿಯೂ ಬಳ್ಳಾರಿಯಲ್ಲಿ ಸ್ಪರ್ಧಿಸುತ್ತೇನೆ : ಜಿ ಸೋಮಶೇಖರ ರೆಡ್ಡಿ



ಬಳ್ಳಾರಿ : ನಮ್ಮ ತಮ್ಮ ಜನಾರ್ದನ ರೆಡ್ಡಿ ಅವರನ್ನು ಸ್ವಾತಂತ್ರ್ಯ ಹೋರಾಟಗಾರರಂತೆ ಬಿಂಬಿಸುವ ಅಗತ್ಯ ನಮಗಿಲ್ಲ. ನಮ್ಮ ಅವಧಿಯಲ್ಲಿ ನಡೆದ ಅಭಿವೃದ್ಧಿ ಕಾಮಗಾರಿಗಳೆ ಸಾಕು ನಮ್ಮ ಬಗ್ಗೆ ಮಾತನಾಡಲು ಎಂದು ಮಾಜಿ ನಗರ ಶಾಸಕ ಸೋಮಶೇಖರ ರೆಡ್ಡಿ ಹೇಳಿದರು.

ಅವರು ಇಂದು ಜನಾರ್ದ ರೆಡ್ಡಿ ಅವರ ಗೃಹ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನು ನಡೆಸಿ ಮಾತನಾಡಿ, ಮೊನ್ನೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಶಾಸಕ ಭರತ್ ರೆಡ್ಡಿ ನನ್ನ ತಮ್ಮ ಜನಾರ್ದನ ರೆಡ್ಡಿಯನ್ನು ಅವರೇನು ಸ್ವತಂತ್ರ ಹೋರಾಟ ಮಾಡಿ ಜೈಲಿಗೆ ಹೋಗಿ ಬಂದಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ, ನಾವು ಸ್ವತಂತ್ರ ಹೋರಾಟಗಾರರಲ್ಲದಿದ್ದರೂ ನಗರದ ಅಭಿವೃದ್ಧಿಗೆ ಸಾಕಷ್ಟು ಕೆಲಸವನ್ನು ಮಾಡಿದ್ದೇವೆ ನಮಗೆ ಅಂತಹ ಯಾವುದೇ ಬಿರುದು ಸನ್ಮಾನಗಳು ಬೇಕಿಲ್ಲ ಎಂದು ಶಾಸಕ ಭರತ್ ರೆಡ್ಡಿ ಹೇಳಿಕೆಗೆ ತಿರುಗೇಟು ನೀಡಿ-ದರು.

ಮುಂದಿನ ಬಾರಿ ನೀವು ಯಾವ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದೀರಿ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು ನಾನು ಬಳ್ಳಾರಿ ನಗರ ಕ್ಷೇತ್ರದಲ್ಲಿ ಸ್ಪರ್ಧಿಸುತ್ತೇನೆ ಒಂದು ವೇಳೆ ಕ್ಷೇತ್ರ ವಿಂಗಡಣೆ-ಯಾಗಿ ಮಹಿಳೆಯರಿಗೆ ಮೀಸಲಾತಿ ಮಾಡಿದಲ್ಲಿ ನನ್ನ ತಮ್ಮನ ಹೆಂಡತಿ ಲಕ್ಷ್ಮಿ ಅರುಣ ಸ್ಪರ್ಧಿಸುತ್ತಾರೆ ಎಂದು ಸ್ಪಷ್ಟೀಕರಿಸಿದರು.

ಸುವರ್ಣ ಬಳ್ಳಾರಿ ಎಂಬ ಹೆಸರನ್ನು ಆಕ್ಷೇಪಿಸಿದ ರೆಡ್ಡಿ ಸರ್ಕಾರಿ ಯೋಜನೆಗಳು ಹಾಗೂ ಕಾಮಗಾರಿಗಳಿಗೆ ವ್ಯಕ್ತಿಗಳ ಅಥವಾ ಕುಟುಂಬ ಸದಸ್ಯರ ಹೆಸರನ್ನು ಬಳಸುವ ವಿಚಾರ ಎಷ್ಟು ಸರಿ ಎಸ್ ಎನ್ ಪೇಟೆಯ ಓವರ್ ಬಿಡ್ಜ್ ಮತ್ತು ಅಂಡರ್ ಬಿಡ್ಜ್ ಹಾಗೂ ರಾಯಲ್ ಸರ್ಕಲ್ ನ ಟವರ್ ಕಾಲ್ ಕ್ಲಾಕ್ ಸೇರಿದಂತೆ ಹಲವಾರು ಅಭಿವೃದ್ಧಿ ಕೆಲಸಗಳು ನಮ್ಮ ಅವಧಿಯಲ್ಲಿಯೇ ಮಾಡಲಾಗಿದೆ, ಯಾರೀ ರಾಜ-ಕಾರಣಿ ವೈಯಕ್ತಿಕವಾಗಿ ನಿಂದನೆ ಮತ್ತು ಹೇಳಿಕೆ ನೀಡುವುದನ್ನು ಬಿಟ್ಟು ಅಭಿವೃದ್ಧಿ ವಿಚಾರವಾಗಿ ಚರ್ಚೆ ಮಾಡಲಿ ಎಂದು ಕಿವಿಮಾತು ಹೇಳಿದರು.

ಅಕ್ರಮ ಗಣಿಗಾರಿಕೆ ಪ್ರಕರಣದ ಕುರಿತು ಟೀಕೆ ಮಾಡುತ್ತಿರುವ ಕಾಂಗ್ರೆಸ್ ಮುಖಂಡರ ವಿರುದ್ಧವೂ ಸೋಮಶೇಖರ ರೆಡ್ಡಿ ವಾಗ್ದಾಳಿ ನಡೆಸಿದರು. "ಜನಾರ್ದನ ರೆಡ್ಡಿ ಒಬ್ಬರೇ ಪ್ರಕರಣಗಳನ್ನು ಎದುರಿಸುತ್ತಿಲ್ಲ. ಇತರರ ಮೇಲೂ ವಿವಿಧ ತನಿಖಾ ಸಂಸ್ಥೆಗಳಲ್ಲಿ ಪ್ರಕರಣಗಳಿವೆ. ಮೊದಲು ತಮ್ಮ ಮನೆಯವರ ಮೇಲಿರುವ ಆರೋಪಗಳ ಬಗ್ಗೆ ಉತ್ತರ ನೀಡಲಿ" ಎಂದು ಹೇಳಿದರು

ಸುದ್ದಿಗೋಷ್ಠಿಯಲ್ಲಿ ಮಾಜಿ ಸಂಸದ ಸಣ್ಣ ಪಕ್ಕೀರಪ್ಪ, ಮಾತನಾಡಿ ನಾಗೇಂದ್ರ ಅವರು ಇತ್ತೀಚೆಗೆ ನಡೆಸಿದ ಸುದ್ದಿಗೋಷ್ಠಿಯಲ್ಲಿ ಬಳಸಿರುವ ಭಾಷೆ ಹಾಗೂ ನೀಡಿರುವ ಹೇಳಿಕೆಗಳನ್ನು ಖಂಡಿಸುವಂತಹ ಪದಗಳಾಗಿವೆ . "ನಾಗೇಂದ್ರ ಅವರು ಯಾಕೆ ಈ ರೀತಿ ಮಾತನಾಡುತ್ತಿದ್ದಾರೆ ಎಂಬುದು ನಮಗೆ ಅರ್ಥವಾಗುತ್ತಿಲ್ಲ. ಎರಡು ಬಾರಿ ಸಚಿವ ಸ್ಥಾನ ಕಳೆದುಕೊಂಡ ಹತಾಶೆಯಿಂದ ಈ ರೀತಿಯ ಹೇಳಿಕೆಗಳನ್ನು ನೀಡುತ್ತಿದ್ದಾರೆ ಅವರಿಗೆ ಯಾಕೋ ಮತಿ ಸರಿಯಿಲ್ಲ ಎಂದು ಅನಿಸುತ್ತಿದೆ. ಇದೇ ರೀತಿ ವರ್ತಿಸುತ್ತಾ ಹೋದರೆ ಮುಂದಿನ ದಿನಗಳಲ್ಲಿ ಬಟ್ಟೆ ಬಿಚ್ಚಿ-ಕೊಂಡು ಬಜಾರ್‌ನಲ್ಲಿ ತಿರುಗುವ ಪರಿಸ್ಥಿತಿ ಬರಬಹುದೇನೋ" ಎಂದ ಅವರು, ಕ್ಷೇತ್ರದ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ವೈಯಕ್ತಿಕ ಟೀಕೆಗಳಲ್ಲಿ ತೊಡಗಿರುವುದು ಸರಿಯಲ್ಲ ಎಂದು ಅವರು ಹೇಳಿದರು.

"ಜನಾರ್ದನ ರೆಡ್ಡಿ ಅವರ ಬಗ್ಗೆ ಪದೇ ಪದೇ ಮಾತನಾಡುವುದನ್ನು ನಿಲ್ಲಿಸಬೇಕು. ಕ್ಷೇತ್ರದ ಅಭಿವೃದ್ಧಿಗೆ ನೀವು ಏನು ಮಾಡಿದ್ದೀರಿ ಎಂಬುದರ ಬಗ್ಗೆ ಜನರಿಗೆ ಉತ್ತರ ನೀಡಿ ಯಾರ ಉಪ್ಪು ತಿಂದಿದ್ದೀರಿ ಎಂಬುದನ್ನು ಮರೆಯಬಾರದು ನಮ್ಮ ವಿರುದ್ಧ ಮಾತನಾಡಲು ಆರಂಭಿಸಿದರೆ ಅದಕ್ಕೆ ತಕ್ಕ ಉತ್ತರ ನೀಡಲು ನಮಗೂ ಗೊತ್ತಿದೆ. ಇನ್ನೊಮ್ಮೆ ಜನಾರ್ದನ ರೆಡ್ಡಿ ಅವರ ಬಗ್ಗೆ ಇದೇ ರೀತಿಯ ಹೇಳಿಕೆ ನೀಡಿದರೆ ನಾವು ಸುಮ್ಮನಿರುವುದಿಲ್ಲ" ಎಂದು ಎಚ್ಚರಿಕೆ ನೀಡಿದರು. ಜನಾರ್ದನ ರೆಡ್ಡಿ ರಾಜೀನಾಮೆ ನೀಡಬೇಕು ಎಂಬ ವಿಷಯದ ಕುರಿತು ಪ್ರಸ್ತಾಪಿಸಿದ ಕಂಪ್ಲಿ ಮಾಜಿ ಶಾಸಕ ಶಾಸಕ ಸುರೇಶ್ ಬಾಬು ಮೊದಲು ನೀವು ಯಾವ ರೀತಿಯ ರಾಜಕೀಯ ಮಾಡಿದ್ದೀರಿ ಎಂಬುದನ್ನು ಪರಿಶೀಲಿಸಿಕೊಳ್ಳಿ. ರಾಜೀನಾಮೆ ವಿಚಾರದಲ್ಲಿ ಸವಾಲು ಹಾಕುವುದಾದರೆ ಎಲ್ಲರೂ ಒಟ್ಟಿಗೆ ರಾಜೀನಾಮೆ ನೀಡಿ ಜನರ ತೀರ್ಪಿಗೆ ಹೋಗೋಣ. ನಾವು ಮುಕ್ತ ರಾಜಕೀಯಕ್ಕೆ ಸಿದ್ಧರಿದ್ದೇವೆ "ಸ್ಪೀಕರ್ ಅವರ ಬಳಿ ಸಮಯ ಪಡೆದು ಎಲ್ಲರೂ ಒಂದೇ ಸಮಯದಲ್ಲಿ ರಾಜೀನಾಮೆ ನೀಡೋಣ. ಜನರ ಮುಂದೆ ಹೋಗಿ ಯಾರು ಗೆಲ್ಲುತ್ತಾರೆ ಎಂಬುದನ್ನು ನೋಡೋಣ" ಎಂದು ಪ್ರತಿ ಸವಾಲು ಹಾಕಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಬಳ್ಳಾರಿ ನಗರ ಅಧ್ಯಕ್ಷ ಗುರ್ರಮ್ ವೆಂಕಟರಮಣ, ಒಬಳೇಶ್, ಮೋತ್ಕರ್ ಶ್ರೀನಿವಾಸ್, ಗುಡಿಗಂಟಿ ಹನುಮಂತ ಸೇರಿದಂತೆ ಬಿಜೆಪಿ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ಭಾರತ್‌ಮಾಲಾ ಹೆದ್ದಾರಿ ಕಾಮಗಾರಿ ವೀಕ್ಷಿಸಿದ ಸಂಸದ



ಯಾದಗಿರಿ: ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಭಾರತ್‌ಮಾಲಾ ಯೋಜನೆಯಡಿ ನಿರ್ಮಾಣವಾಗುತ್ತಿರುವ ಚೆನ್ನೈ ಸೂರತ್ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯ ಪ್ಯಾ-ಕೇಜ್3 ಅನ್ನು ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಜಿ. ಕುಮಾರ ನಾಯಕ ಅವರು ಇಂದು ವೀಕ್ಷಿಸಿದರು.

ಪ್ಯಾಕೇಜ್ 3ರ ವ್ಯಾಪ್ತಿಯಲ್ಲಿ ಬಸಂತಪುರದಿಂದ ಶಹಾಪುರ ತಾಲೂಕಿನ ಸಿರವಾಳ್ ಗ್ರಾಮದವರೆಗೆ ನಡೆಯುತ್ತಿರುವ ಹೆದ್ದಾರಿ ಕಾಮಗಾರಿಯ ಪ್ರಗತಿಯನ್ನು ಪರಿಶೀಲಿಸಿದ ಸಂಸದರು, ಕಾಮಗಾರಿಯ ಗುಣಮಟ್ಟ ಹಾಗೂ ಪ್ರಗತಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಹೆದ್ದಾರಿ ನಿರ್ಮಾಣದಿಂದ ರೈತರಿಗೆ ಹಾಗೂ ಗ್ರಾಮಸ್ಥರಿಗೆ ಯಾವುದೇ ರೀತಿಯ ತೊಂದ-ರೆಯಾಗದಂತೆ ಅಗತ್ಯವಿರುವ ಕಡೆಗಳಲ್ಲಿ ಅಂಡರ್‌ಪಾಸ್‌ಗಳನ್ನು ನಿರ್ಮಿಸಬೇಕು.

ರೈತರು ತಮ್ಮ ಜಮೀನುಗಳಿಗೆ ಸುಗಮವಾಗಿ ತೆರಳಲು ಅನುಕೂಲವಾಗುವಂತೆ ಸರ್ವೀಸ್ ರಸ್ತೆಗಳ ವ್ಯವಸ್ಥೆ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅದೇ ರೀತಿ, ಗ್ರಾಮಗಳ ಪ್ರವೇಶ ನಿರ್ಗಮನ, ಅಂಡರ್‌ಪಾಸ್, ಸರ್ವೀಸ್ ರಸ್ತೆ ಹಾಗೂ ತಿರುವುಗಳಿರುವ ಸ್ಥಳಗಳಲ್ಲಿ ವಾಹನ ಸವಾರರಿಗೆ ಸ್ಪಷ್ಟವಾಗಿ ಮಾಹಿತಿ ದೊರೆಯುವಂತೆ ಸೂಚನಾ ಫಲಕಗಳು ಹಾಗೂ ಅಗತ್ಯ ಸುರಕ್ಷತಾ ವ್ಯವಸ್ಥೆಗಳನ್ನು ಅಳವಡಿಸುವಂತೆ ತಿಳಿಸಿದರು.

ಹೆದ್ದಾರಿ ಕಾಮಗಾರಿ ಸಂದರ್ಭದಲ್ಲಿ ರೈತರ ಜಮೀನುಗಳಿಗೆ ತೆರಳುವ ದಾರಿಗಳು ಬಂದ್ ಆಗದಂತೆ ಪರ್ಯಾಯ ಮಾರ್ಗಗಳನ್ನು ಕಲ್ಪಿಸಬೇಕು.

ಮಳೆಗಾಲದಲ್ಲಿ ನೀರು ನಿಲ್ಲದಂತೆ ಚರಂಡಿ ಹಾಗೂ ನೀರು ಹರಿದು ಹೋಗುವ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ಮಿಸಬೇಕು ಎಂದು ಸೂಚಿಸಿದರು.

# ನಂದಿಪುರ: ಶ್ರೀ ಗುರು ದೊಡ್ಡಬಸವೇಶ್ವರ ಸ್ವಾಮಿ, ಹೊಳೆಪೂಜೆ

ಹಗರಿಬೊಮ್ಮನಹಳ್ಳಿ: ತಾಲ್ಲೂಕಿನ ನಂದಿಪುರ ಪುಣ್ಯಕ್ಷೇತ್ರದಲ್ಲಿ, ಶ್ರಾವಣ ಮಾಸದ ಶುದ್ಧ ಮೂರನೇ ಸೋಮವಾರದಂದು ಪ್ರತಿವರ್ಷದ ಪದ್ಧತಿಯಂತೆ ನಡೆಯುವ ಶ್ರೀ ಗುರು ದೊಡ್ಡಬಸವೇಶ್ವರ ಸ್ವಾಮಿ ಹಾಗೂ ಶ್ರೀ ಆಂಜನೇಯ ಸ್ವಾಮಿಯ ಹೊಳೆಪೂಜೆ ಈ ಬಾರಿ ಕೂಡ ಭಕ್ತಿಭಾವದಿಂದ ಜರುಗಿತು.

ಬೆಳಗಿನ ಜಾವ ಕ್ಷೇತ್ರದ ದೇವಾಲಯದಲ್ಲಿ ಅಭಿಷೇಕ, ಬಿಲ್ವಾರ್ಚನೆ, ಮಹಾಮಂಗಳಾರತಿ ಜರುಗಿದವು. ಸಂಜೆ ಉತ್ಸವ ಮೂರ್ತಿಗಳನ್ನು ಹೂವುಗಳಿಂದ ಅಲಂಕರಿಸಿದ ಪಲ್ಲಕ್ಕಿಯಲ್ಲಿರಿಸಿ, ಡೊಳ್ಳು, ಸಮಾಳ, ಭಜನೆ ಮೂಲಕ ತುಂಗಭದ್ರಾ ಹೊಳೆಯನ್ನು ತಲುಪಲಾಯಿತು. ತಾಲ್ಲೂಕಿನ ತಂಬ್ರಹಳ್ಳಿಯ ಶ್ರೀ ಬಂಡೆ ರಂಗನಾಥ ಸ್ವಾಮಿಯ ಬೆಟ್ಟದಡಿಯಲ್ಲಿ ಹರಿಯುವ ತುಂಗಭದ್ರಾ ನದಿತೀರದಲ್ಲಿ ಶಾಸ್ತ್ರೋಕ್ತ ವಿಧಿ-ವಿಧಾನಗಳೊಂದಿಗೆ ಗಂಗೆ ಪೂಜೆಯನ್ನು ನೆರವೇರಿಸಿ, ಪಾಯಸ ತಯಾರಿಸಿ, ನೈವೇದ್ಯ ಮಾಡಿ ವಿತರಿಸಲಾಯಿತು.



ಕೋಳೂರಿನ ಹಿರೇಮಠದ ವಿಜಯ್ ಶಾಸ್ತ್ರಿ ಹಾಗೂ ನಂದಿಪುರದ ಹೆಚ್.ಎಂ. ಕೊಟ್ರೇಶ ಶ್ರದ್ಧಾ ಪೂರ್ವಕವಾಗಿ ಪೌರೋಹಿತ್ಯ ಸೇವೆ ನೆರವೇರಿಸಿದರು. ಈ ಸಂದರ್ಭದಲ್ಲಿ ಕ್ಷೇತ್ರದ ಬಣಕಾರರು, ಗ್ರಾಮದ ಮುಖಂಡರು ಹಾಗೂ ನೂರಾರು ಭಕ್ತಾದಿಗಳು ಹಾಜರಿದ್ದರು. ಎಲ್ಲರೂ ನದಿತೀರದಲ್ಲಿ ಭಕ್ತಿ ಭಾವದಿಂದ ಪೂಜೆಯಲ್ಲಿ ಪಾಲ್ಗೊಂಡು, ಶ್ರೀ ದೊಡ್ಡಬಸವೇಶ್ವರ ಸ್ವಾಮಿ ಹಾಗೂ ಶ್ರೀ ಆಂಜನೇಯ ಸ್ವಾಮಿಯ ಕೃಪೆಗೆ ಪಾತ್ರರಾದರು.

# ಸೆ.5ರಂದು ಎಸ್.ಕೆ. ಮೋದಿ ನ್ಯಾಷನಲ್ ಸ್ಕೂಲ್‌ನಲ್ಲಿ ವಿಜ್ಞಾನ ಉದ್ಯಾನ ಉದ್ಘಾಟನೆ : ರಾಜಶೇಖರ್



ಬಳ್ಳಾರಿ : ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ, ಸಂಶೋಧನಾ ಆಸಕ್ತಿ ಹಾಗೂ ನಾವೀನ್ಯತೆಯ ಚಿಂತನೆ ಬೆಳೆಸುವ ಉದ್ದೇಶದಿಂದ ನಗರದ ವೀರಶೈವ ಕಾಲೇಜು ಮೈದಾನದ ಆವರಣದಲ್ಲಿರುವ ಎಸ್.ಕೆ. ಮೋದಿ ನ್ಯಾಷನಲ್ ಸ್ಕೂಲ್‌ನಲ್ಲಿ ಸೆಪ್ಟೆಂಬರ್ 5ರಂದು ಶನಿವಾರ ನಾವೀನ್ಯತೆ ಉತ್ಸವ ಹಾಗೂ ವಿಜ್ಞಾನ ಉದ್ಯಾನ ಉದ್ಘಾಟನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಶಾಲೆಯ ಅಧ್ಯಕ್ಷ ಏಳುಬೆಂಚಿ ರಾಜಶೇಖರ ತಿಳಿಸಿದರು.ನಗರದ ವಿ ವಿ ಸಂಘದ ಎಸ್.ಕೆ. ಮೋದಿ ನ್ಯಾಷನಲ್ ಸ್ಕೂಲ್‌ನಲ್ಲಿ ಬುಧವಾರ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ರಾಜಶೇಖರ್ , ವಿದ್ಯಾರ್ಥಿಗಳಲ್ಲಿರುವ ಪ್ರತಿಭೆ ಮತ್ತು ವೈಜ್ಞಾನಿಕ ಚಿಂತನೆಯನ್ನು ಸಮಾಜದ ಮುಂದೆ ಅನಾವರಣಗೊಳಿಸುವ ಉದ್ದೇಶದಿಂದ ಈ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ,

ಕಾರ್ಯಕ್ರಮದಲ್ಲಿ ಇಸ್ರೋದ ಮಾಜಿ ಅಧ್ಯಕ್ಷರಾದ ಎ.ಎಸ್. ಕಿರಣ್ ಕುಮಾರ್ ಅವರು ಗೌರವ ಅತಿಥಿಗಳಾಗಿ ಭಾಗವಹಿಸಲಿದ್ದಾರೆ, ಡಿ.ಆರ್.ಡಿ.ಒ ದ ವೈಮಾನಿಕ ಅಭಿವೃದ್ಧಿ ಸ್ಥಾಪನೆಯ ನಿವೃತ್ತ ವಿಜ್ಞಾನಿ 'ಜಿ' ಡಾ. ವಿ. ಸುಬ್ರಮಣಿಯನ್, ವಿಜ್ಞಾನಿ 'ಎಫ್' ಡಾ. ಬಾಲಸುಬ್ರಮಣಿಯನ್ ಎಸ್., ಹಾಗೂ ಬಳ್ಳಾರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್, ಐಪಿಎಸ್ ಅವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ

ಮತ್ತು ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ

ವಿ.ವಿ. ಸಂಘದ ಅಧ್ಯಕ್ಷ ಡಾ. ಕಣೇಕಲ್ ಮಹಾಂತೇಶ್, ಕಾರ್ಯದರ್ಶಿ ಡಾ. ಅರವಿಂದ್ ಪಟೇಲ್, ಖಜಾಂಚಿ ಬೈಲುವದ್ದಿಗೇರಿ ಯೆರ್ರಿಸ್ವಾಮಿ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಎಸ್.ಕೆ. ಮೋದಿ ನ್ಯಾಷನಲ್ ಸ್ಕೂಲ್‌ನ ಆಡಳಿತ ಮಂಡಳಿ ಸದಸ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ. ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಆಗಮಿಸಿ ಯುವ ಸಂಶೋಧಕರನ್ನು ಪ್ರೋತ್ಸಾಹಿಸಿ ಎಂದು ಮನವಿ ಮಾಡಿದರು.ಸುದ್ದಿಗೋಷ್ಠಿಯಲ್ಲಿ ಆಡಳಿತ ಮಂಡಳಿ ಸದಸ್ಯ ಅಣ್ಣಾ ವಿರೂಪಾಕ್ಷಪ್ಪ ಹಾಗೂ ಶಾಲೆಯ ಪ್ರಾಂಶುಪಾಲರಾದ ಸುನಂದಾ ಎಂ. ಪಾಟೀಲ್, ವಸಂತ್ ಸೇರಿದಂತೆ ಇತರರು ಇದ್ದರು.

# ಮನೆಗೆ ನುಗ್ಗಿ ಒಂಟಿ ಮಹಿಳೆಯ ಮೇಲೆ ಅತ್ಯಾಚಾರ!

ಹರಪನಹಳ್ಳಿ : ಮನೆಯಲ್ಲಿ ಒಂಟಿಯಾಗಿದ್ದ ಮಹಿಳೆಯ ಮೇಲೆ ಬಲವಂತವಾಗಿ ಎಳೆದು ಅತ್ಯಾಚಾರ ಮಾಡಿದ ಘಟನೆ ಭಾನವಾರ ಬೆಳಗಿನ ಜಾವ 11 ಗಂಟೆಯ ಸುಮಾರಿನಲ್ಲಿ ತಾಲೂಕಿನ ಅಗ್ರಹಾರ ತಾಂಡದಲ್ಲಿ ನಡೆದಿದೆ.

ಸಂತ್ರಸ್ತ ಮಹಿಳೆಯು ವಿವಾಹಿತೆಯಾಗಿದ್ದು ಮನೆಯಲ್ಲಿ ಒಬ್ಬಂಟಿಯಾಗಿರುವುದನ್ನು ಗಮನಿಸಿದ್ದ ಅದೇ ಗ್ರಾಮದ ನಾಗನಾಯ್ಕ (28) ಸಂತ್ರಸ್ಥೆ ಮಹಿಳೆಯ ಮೈದುನನ ಸ್ನೇಹಿತನಾಗಿದ್ದು ಆತನನ್ನು ಕೇಳಿಕೊಂಡು ಮನೆಗೆ ಬಂದಿದ್ದಾನೆ, ಆಗ ಸಂತ್ರಸ್ಥೆಯು ಮೈದುನ ಮನೆಯಲ್ಲಿ ಇಲ್ಲದಿರುವುದಾಗಿ ತಿಳಿಸಿದ್ದಾಳೆ. ಆಗ ನಾಗ್ಯಾನಾಯ್ಕನು ಅವರು ಮನೆಯಲ್ಲಿ ಇಲ್ಲದಿರುವುದೇ ನನಗೂ ಬೇಕಿದೆ ಬಹಳ ದಿನಗಳಿಂದ ನಿನ್ನ ಮೇಲೆ ವ್ಯಾಮೋಹವಿತ್ತು ನೀನು ನಿನ್ನ ಮೈದುನನಿಗೆ ಇದನ್ನು ಹೇಳಿದರೆ ನಿನ್ನನ್ನು ಕೊಲ್ಲುವುದಾಗಿ ಬೆದರಿಕೆ ಹಾಕಿ, ಮನೆಯ ಒಳಕ್ಕೆ ಏಕಾಏಕಿ ನುಗ್ಗಿ ಬಾಗಿಲನ್ನು ಹಾಕಿ ಮಹಿಳೆಯನ್ನು ಬಲವಾಗಿ ಬಿಗಿದಪ್ಪಿ ಅತ್ಯಾಚಾರವೆಸಗಿದ್ದಾನೆ.

ಆ ವೇಳೆ ಸಂತ್ರಸ್ಥೆ ಮಹಿಳೆಯು ಆತನ ಕೈಯನ್ನು ಕಡಿದು ಚೀರಾಡಿದ್ದಾಳೆ ಆಗ ಅಕ್ಕಪಕ್ಕದಲ್ಲಿದ್ದ ಗ್ರಾಮಸ್ಥರು ಮನೆಯ ಬಳಿ ಬಂದಾಗ ನಾಗನಾಯ್ಕನು ತಪ್ಪಿಸಿಕೊಂಡು ಹೋಡಿ ಹೋಗಿದ್ದಾನೆ. ಅತ್ಯಾಚಾರವೆಸಗಿದ ನಾಗನಾಯ್ಕನ ಮೇಲೆ ಹರಪನಹಳ್ಳಿ ಪೋಲಿಸ್ ಠಾಣೆಯಲ್ಲಿ ಸೋಮವಾರ ಪ್ರಕರಣ ದಾಖಲಾಗಿದೆ..

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.